MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 61 | ಭಾನುವಾರ : 21-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 61 | SUNDAY : 21-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

### ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಎಡಿಸಿ ಸೂಚನೆ

## ಪ್ರತಿ ಮಗುವಿಗೂ ಪಲ್ಸ್ ಪೋಲಿಯೊ ಲಸಿಕೆ ಸಿಗಬೇಕು



ಯುವಮಾರ್ಗ ಸುದ್ದಿ

**ರಾಯಚೂರು,ಡಿ.20–** ಜಿಲ್ಲೆಯಲ್ಲಿ ಡಿಸೆಂಬರ್ 21ರಿಂದ ಡಿಸೆಂಬರ್ 24ರವರೆಗೆ ನಿಗದಿಯಾದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನವನ್ನು ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಶಿಸ್ತುಬದ್ಧವಾಗಿ ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು. ಡಿಸೆಂಬರ್ 20ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಎರಡನೇ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲು ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ 1132 ಕೇಂದ್ರಗಳನ್ನು ತೆರೆಯಲಾಗಿದ್ದು, ಸುಮಾರು 2,59,984 ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಜಿಲ್ಲೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘ ಸಂಸ್ಥೆಗಳು ವಿವಿಧ ಇಲಾಖೆಗಳ ಸಹಕಾರ ಅಗತ್ಯವಿರುವದರಿಂದ ಎಲ್ಲರೂ ಆರೋಗ್ಯ ಇಲಾಖೆಗೆ ಸಹಕಾರ ನೀಡಬೇಕು ಎಂದರು.

ಪೋಲಿಯೋ ಲಸಿಕಾ ಅಭಿಯಾನಕ್ಕೆ ನಿಯೋಜನೆಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಡಿ.21ರಿಂದ ಗೊತ್ತುಪಡಿಸಿರುವ ಲಸಿಕಾ ಕೇಂದ್ರಗಳಲ್ಲಿ 5 ವರ್ಷದ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆಯನ್ನು ನೀಡಲು ಕ್ರಮವಹಿಸಬೇಕು. ಮನೆಮನೆ ಭೇಟಿ ಮೂಲಕವು ಸಹ ಆರೋಗ್ಯ ಕಾರ್ಯಕರ್ತರು 5 ವರ್ಷದ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಿದ್ದಾರೆ. ಸಾರ್ವಜನಿಕರು ಲಸಿಕಾ ಅಭಿಯಾನದ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

1132 ಲಸಿಕಾ ಬೂತ್‌ಗಳ ಸ್ಥಾಪನೆ: ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಅವರು ಮಾತನಾಡಿ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 143, ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ 140, ಲಿಂಗಸುಗೂರು ತಾಲೂಕಿನಲಿ 211, ಮಾನ್ವಿ. ತಾಲೂಕಿನಲ್ಲಿ 221, ಸಿಂಧನೂರು. ತಾಲೂಕಿನಲ್ಲಿ 248, ರಾಯಚೂರು ಗ್ರಾಮೀಣ ಭಾಗದಲ್ಲಿ 169 ಸೇರಿದಂತೆ ಜಿಲ್ಲಾದ್ಯಂತ 1132 ಬೂತ್‌ಗಳನ್ನು ಸ್ಥಾಪಿಸಲಾಗಿದೆ. ಲಸಿಕಾ ಕಾರ್ಯಕ್ರಮದ ಕುರಿತು ಆಟೋ, ಸ್ಥಳೀಯ ಸಂಸ್ಥೆಯ ಕಸದ ಸಂಗ್ರಹಣೆ ವಾಹನಗಳಲ್ಲಿ ಧ್ವನಿವರ್ಧಕಗಳ ಮೂಲಕ, ಬ್ಯಾನರ್ ಹಾಗೂ ಕರಪತ್ರಗಳನ್ನು ಅಂಟಿಸುವ ಮೂಲಕ ನಾಗರಿಕರಲ್ಲಿ ಅರಿವು ಮೂಡಿಸುವ ಕೆಲಸ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. (2ನೇ ಪುಟಕ್ಕೆ..)

### ರಾಜ್ಯದಲ್ಲಿರುವ ಅಕ್ರಮ ವಲಸಿಗರನ್ನು ಹೊರಗಟ್ಟುವಂತೆ ಸರ್ಕಾರಕ್ಕೆ ಅಶೋಕ್ ಆಗ್ರಹ



**ಬೆಂಗಳೂರು,ಡಿ.20–** ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅಕ್ರಮ ವಲಸಿಗರ ಮೇಲೆ ಕಠಿಣ ಕ್ರಮಕೈಗೊಂಡು ಅವರನ್ನು ಹೊರದಬ್ಬುವ ಕೆಲಸ ಮಾಡಬೇಕು ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್ ಅಶೋಕ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ತಮ ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯದೆಲ್ಲೆಡೆ ಅಕ್ರಮ ವಲಸಿಗರ ಪಿಡುಗು ಮಿತಿ ಮೀರಿದೆ. ರಾಜ್ಯದಲ್ಲಿರುವ ಸುಮಾರು 20 ಲಕ್ಷ ಅಕ್ರಮ ವಲಸಿಗರನ್ನು ಹೊರಹಾಕುವ ಬದಲು ಅವರನ್ನು ಮತ ಬ್ಯಾಂಕ್‌ಗಾಗಿ ಪೋಷಿಸುವ ಕೆಲಸವನ್ನು ಸರ್ಕಾರ ವ್ಯವಸ್ಥಿತವಾಗಿ ಮಾಡುತ್ತಿದೆ ಎಂದು ಆರೋಪಿಸಿದ್ದಾರೆ.

ಅಕ್ರಮ ವಲಸಿಗರು ರಾಷ್ಟ್ರೀಯ ಭದ್ರತೆಗೆ ಅಪಾಯ ತಂದೊಡ್ಡುತ್ತಿದ್ದಾರೆ. ಚುನಾವಣಾ ಆಯೋಗವು RLR ಮೂಲಕ ಮತದಾರರ ಪಟ್ಟಿಯಿಂದ ಅಕ್ರಮ ವಲಸಿಗರನ್ನು ಹೊರಹಾಕಲು ಮುಂದಾದರೆ, ಕಾಂಗ್ರೆಸ್ ಪಕ್ಷವು ಅವರ ಪರವಾಗಿ ಮೃದು ಧೋರಣೆ ತಾಳಿ ಮತಗಳ್ಳತನ ಎಂಬ ಕುಂಟು ನೆಪವೊಡ್ಡಿ ಬೀದಿಗಿಳಿದು ನಾಟಕ ಮಾಡುತ್ತಿದೆ.

ಕೊಲೆ, ಹಲ್ಲೆ, ಸುಲಿಗೆ, ದರೋಡೆ, ಅತ್ಯಾಚಾರ ಮತ್ತು ಗಲಭೆ ಪ್ರಕರಣದಲ್ಲಿ ಈ ಅಕ್ರಮ ವಲಸಿಗರ ಸಂಖ್ಯೆ ಹೆಚ್ಚಿದೆ. ಕಾಂಗ್ರೆಸ್ ಸರ್ಕಾರದ ಅತಿಯಾದ ಓಲೈಕೆ ರಾಜಕಾರಣದ ಕಾರಣಕ್ಕೆ ಅವರಿಗೆ ಬೇಕಾದಂತಹ ದಾಖಲಾತಿಗಳು ಅಕ್ರಮವಾಗಿ ಸಿಗುತ್ತಿದೆ ಎಂದು ದೂರಿದ್ದಾರೆ. (2ನೇ ಪುಟಕ್ಕೆ...)

## 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ: ಸಂಸದ ಜಿ. ಕುಮಾರ್ ನಾಯಕ್ ಉದ್ಘಾಟನೆ

ಯುವಮಾರ್ಗ ಸುದ್ದಿ



**ರಾಯಚೂರು,ಡಿ.20–** ದಲಿತ ಸಾಹಿತ್ಯ ಪರಿಷತ್ತು (ರಿ) ರಾಜ್ಯ ಘಟಕ ಗದಗದ ವತಿಯಿಂದ ಆಯೋಜಿಸಲಾಗಿದ್ದ 11ನೇ ಅಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನಕ್ಕೆ ರಾಯಚೂರು ನಗರದಲ್ಲಿ ಅದ್ದೂರಿ ಚಾಲನೆ ದೊರೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿದ ಸಂಸದರಾದ ಜಿ. ಕುಮಾರ್ ನಾಯಕ್ ಅವರು ನಂತರ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಬುದ್ಧನ ಭಾವಚಿತ್ರಕ್ಕೆ ಪುಷ್ಪಾರ್ಚನೆಯನ್ನು ಸಲ್ಲಿಸಿ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಈ ಸಾಹಿತ್ಯ ಸಂಭ್ರಮದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾದ ಡಾ. ಜಯದೇವಿ ಗಾಯಕವಾಡ್ ಅವರು ಉಪಸ್ಥಿತರಿದ್ದರು. ಸಮಾರಂಭದಲ್ಲಿ ಹಿರಿಯ ಸಾಹಿತಿಗಳಾದ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ, ಸಾಹಿತಿಗಳು ಹಾಗೂ ಮಾಜಿ ರಾಜ್ಯಸಭಾ ಸದಸ್ಯರಾದ ಡಾ. ಎಲ್. ಹನುಮಂತಯ್ಯ, ದಲಿತ ಸಾಹಿತ್ಯ ಪರಿಷತ್ ರಾಜ್ಯ ಘಟಕದ ಅಧ್ಯಕ್ಷರಾದ ಡಾ. ಅರ್ಜುನ್ ಗೋಳಸಂಗಿ ಹಾಗೂ ಖ್ಯಾತ ಸಾಹಿತಿ ಡಾ. ಮನು ಬಳಿಗಾರ್ ಅವರು ಭಾಗವಹಿಸಿ ಕಾರ್ಯಕ್ರಮದ ಶೋಭೆ ಹೆಚ್ಚಿಸಿದರು.

ಸ್ಥಳೀಯ ಜನಪ್ರತಿನಿಧಿಗಳಾದ ರಾಯಚೂರು ನಗರದ ಶಾಸಕ ಡಾ. ಶಿವರಾಜ ಪಾಟೀಲ್ ಹಾಗೂ ಮಹಾನಗರ ಪಾಲಿಕೆಯ ಮೇಯರ್ ನರಸಮ್ಮ ನರಸಿಂಹ ಮಾಡಗಿರಿ ಅವರು ಅತಿಥಿಗಳಾಗಿ ಆಗಮಿಸಿದ್ದರು. ವೇದಿಕೆಯ ಮೇಲೆ ಹಿರಿಯರಾದ ಕೆ. ಶಾಂತಪ್ಪ ಮತ್ತು ಜಯಣ್ಣ ಅವರೂ ಸೇರಿದಂತೆ ದಲಿತ ಸಾಹಿತ್ಯ ಪರಿಷತ್ತಿನ ವಿವಿಧ ಪದಾಧಿಕಾರಿಗಳು, ಸದಸ್ಯರು ಹಾಗೂ ದೊಡ್ಡ ಸಂಖ್ಯೆಯಲ್ಲಿ ಸಾರ್ವಜನಿಕರು ಪಾಲ್ಗೊಂಡು ಸಮ್ಮೇಳನವನ್ನು ಯಶಸ್ವಿಗೊಳಿಸಿದರು.

## ರಾಮಕ್ಕಮ್ಮ ದೇವಿ ದೇವಸ್ಥಾನದಲ್ಲಿ ಕಾರ್ತಿಕ ಮಾಸದ ದೀಪೋತ್ಸವ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.20–** ತಾಲೂಕಿನ ಹಿರೇಕೋಟ್ನೆಕಲ್ ,ಭೋಗವಾತಿ ಅವಳಿ ಗ್ರಾಮದಲ್ಲಿನ ರಾಮಕ್ಕಮ್ಮ ದೇವಿ ದೇವಸ್ಥಾನದ ಆವರಣದಲ್ಲಿ ನಡೆದ ಕಾರ್ತಿಕ ಮಾಸದ ದೀಪೋತ್ಸವ ಹಾಗೂ ಪ್ರವಚನ ಕಾರ್ಯಕ್ರಮದಲ್ಲಿ ಮಾಜಿ ಸಂಸದ ಬಿ.ವಿ.ನಾಯಕ ಮಾತನಾಡಿ ಗ್ರಾಮದ ಆರಾಧ್ಯ ಶಕ್ತಿ ದೇವತೆಯಾಗಿರುವ ರಾಮಕ್ಕಮ್ಮ ದೇವಿಯು ಅನೇಕ ವರ್ಷಗಳಿಂದ ಭಕ್ತರಿಗೆ ಅನುಗ್ರಹವನ್ನು ನೀಡುತ್ತ ಬಂದಿರುವ ಶಕ್ತಿ ದೇವತೆಯ ದೇವಸ್ಥಾನದ ಜೀರ್ಣೋದರಕ್ಕೆ ಗ್ರಾಮದ ಭಕ್ತರು ಮುಂದಾಗಿದ್ದು ನನ್ನಿಂದಾಗುವ ಸಹಕಾರವನ್ನು ನೀಡುವುದಾಗಿ ಬರವಸೇ ನೀಡಿದರು.

ಅಡವಿ ಅಮರೇಶ್ವರ ಮಠದ ಶ್ರೀ ತೊಂಟದಾರ್ಯ ಮಹಾಸ್ವಾಮಿಗಳು ದಿವ್ಯಸಾನಿಧ್ಯವನ್ನು ವಹಿಸಿ ಆರ್ಶಿವಾಚನ ನೀಡಿ ಅಧ್ಯಾತ್ಮಿಕ ಪ್ರವಚನವನ್ನು ಅಲಿಸುವುದರಿಂದ ಪುಣ್ಯ ಪ್ರಾಪ್ತಿಯಾಗುವುದರ ಜೋತೆಗೆ ಮಕ್ಕಳಲ್ಲಿನ ಶರಣರ, ಸಂತರ, ಮಹಾಯೋಗಿಗಳ ಅದರ್ಶ ಜೀವನ ಹಾಗೂ ಅವರ ತತ್ವಗಳ ಬಗ್ಗೆ ತಿಳಿಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶ್ರೀ ರುದ್ರಯ್ಯಶಾಸ್ತ್ರಿಗಳು ರಾಮಕ್ಕಮ್ಮ ದೇವಿ ಕುರಿತು ಅಧ್ಯಾತ್ಮಿಕ ಪ್ರವಚನ ನೀಡಿದರು. ಸಂಜೆ ಕಾರ್ತಿಕ ದೀಪೋತ್ಸವ ನಡೆಯಿತು.

ಮಾನ್ವಿ ಬಿಜೆಪಿ ಮಂಡಲ ಅಧ್ಯಕ್ಷರಾದ ವೀರಭದ್ರಗೌಡ ಭೋಗವತಿ, ಮುಖಂಡರಾದ ತಿಮ್ಮರೆಡ್ಡಿ ಭೋಗವತಿ, ಅ.ಭಾ.ವೀ. ಲಿಂ. ಮಹಾಸಭಾ ತಾಲೂಕು ಅಧ್ಯಕ್ಷರಾದ ಅರುಣಚಂದಾ , ಜಗದೀಶ ಒತ್ತೂರು, ಉಮೇಶ ಸಜ್ಜನ, ಶಂಭನಗೌಡ,ವಿಜಯ ಕುಮಾರ ಮೇಟಿ,ಚನ್ನಬಸವ ಸುಗನೂರು ಸೇರಿದಂತೆ ಇನ್ನಿತರರು ಇದ್ದರು.

## ಸರಕಾರಿ ಕಾಲೇಜು 'ಪ್ರವೇಶಾತಿ ಅಭಿಯಾನಕ್ಕೆ' ಪಾಲಕರ ಸಹಕಾರ ಅಗತ್ಯ ; ಹನುಮಂತ ಕೋರಾಪುರ

ಯುವಮಾರ್ಗ ಸುದ್ದಿ



**ಸಿರವಾರ,ಡಿ.20–** "ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಪ್ರವೇಶ ಪ್ರಮಾಣ ಕಡಿಮೆ ಆಗುತ್ತಿದೆ ಎಂಬ ಆರೋಪಗಳ ನಡುವೆಯೇ ಈ ಬಾರಿ ಸರಕಾರಿ ಕಾಲೇಜುಗಳಲ್ಲಿ ದಾಖಲಾತಿಯ ಪ್ರಮಾಣ ಸರ್ಕಾರವು ಐತಿಹಾಸಿಕ ತೀರ್ಮಾನ ಕೈಗೊಳ್ಳಲಾಗಿದೆ "ಪ್ರವೇಶಾತಿ ಅಭಿಯಾನ ಎಂಬ ಈ ಕಾರ್ಯಕ್ರಮವನ್ನು ಕೈಗೆತ್ತಿಕೊಂಡಿದೆ. ಈ ಅಭಿಯಾನಕ್ಕೆ ಪಾಲಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಸಿರವಾರ ಸರಕಾರಿ ತು ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಹನುಮಂತ ಕೋರಾಪುರ ಹೇಳಿದರು.

ಅವರು ಗುರುವಾರ ರಂದು ಸಿರವಾರ ಪಟ್ಟಣದ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ನಡೆದ "ಪ್ರವೇಶಾತಿ ಅಭಿಯಾನ"2026 27 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು 'ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಪ್ರವೇಶ ಸಂಖ್ಯೆ ಕಡಿಮೆಯಾಗುತ್ತಿದೆ.
ಅದ್ದರಿಂದ ಸರ್ಕಾರವು ವಿದ್ಯಾರ್ಥಿಗಳನ್ನು ಆಕರ್ಷಿಸುವ ನಿಟ್ಟಿನಲ್ಲಿ ನೂತನ "ಪ್ರವೇಶಾತಿ ಅಭಿಯಾನ" ಕಾರ್ಯಕ್ರಮಹಮ್ಮಿಕೊಂಡಿದ್ದು ಈ ಕಾರ್ಯಕ್ರಮದಲ್ಲಿ ಪಾಲಕರ ಪಾತ್ರ ಅತಿಮುಖ್ಯ ಪಾತ್ರವನ್ನು ವಹಿಸುತ್ತದೆ.ಸರಕಾರಿ ಕಾಲೇಜಿನಲ್ಲಿ ಉನ್ನತ ಗುಣಮಟ್ಟದ ಶಿಕ್ಷಣ ತೊರೆಯುತ್ತದೆ. ವಿದ್ಯಾರ್ಥಿಗಳ ಉತ್ತಮ ಗುಣಮಟ್ಟದ ಫಲಿತಾಂಶವೇ ನಮ್ಮ ಗುರಿಯಾಗಿದೆ. ನಮ್ಮ ಪ್ರಥಮ ದರ್ಜೆ ಕಾಲೇಜಿನಲ್ಲಿ ಬಿ.ಎ, ಬಿ.ಕಾಂ, ಬಿ.ಎಸ್ಸಿ, ಮತ್ತು ಬಿ.ಸಿ.ಎ ತರಗತಿಗಳಿಗೆ ಉನ್ನತ ಗುಣಮಟ್ಟದ ಉಪನ್ಯಾಸಕರನ್ನು ಹೊಂದಿದ್ದು, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಲಭ್ಯವಿರುವ ವಿವಿಧ ಕೋರ್ಸ್‌ಗಳ ಲಭ್ಯವಿದೆ. ನಮ್ಮ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರವೇಶಾತಿಯನ್ನು ಮಾಡಬೇಕು ಎಂದರು.

ಈ ಸಂದರ್ಭದಲ್ಲಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಹನುಮಂತ ಚನ್ನೂರ್, ಪದವಿ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಸುಭಾನ್ ಸಾಬ್.ಎಸ್, ಮುತ್ತಪ್ಪ, ರಾಜಶೇಖರ ಎಂ ದೈಹಿಕ ಶಿಕ್ಷಣ ನಿರ್ದೇಶಕರು, ಉಪನ್ಯಾಸಕರಾದ ಫರೀದ್ ಹಾಗೂ ಜಯಪ್ಪ ಪದವಿ ಕಾಲೇಜಿನ ಎಸ್.ಡಿ.ಎ ಬಸವರಾಜ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಆಲ್ಕೋಡ್ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಬೇಟಿ ಬಚಾವ್ರೊ, ಬೇಟಿ ಪಡಾವ್ರೊ ಜಾಗೃತಿ ಕಾರ್ಯಕ್ರಮ



ಯುವಮಾರ್ಗ ಸುದ್ದಿ

**ರಾಯಚೂರು,ಡಿ.20–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲೆಯ ದೇವದುರ್ಗ ತಾಲೂಕಿನ ಆಲ್ಕೋಡ್ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಕೇಂದ್ರ ಸರ್ಕಾರದ ಬೇಟಿ ಬಚಾವ್ರೊ, ಬೇಟಿ ಪಡಾವ್ರೊ ಯೋಜನೆಯ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮವು ಇತ್ತೀಚಿಗೆ ನಡೆಯಿತು.

ಈ ವೇಳೆ ಮಿಷನ್ ಶಕ್ತಿ ಯೋಜನೆಯ ಜಿಲ್ಲಾ ಸಂಯೋಜಕರಾದ ಬಾವಸಲಿ ಅವರು ಮಾತನಾಡಿ, ಬೇಟಿ ಬಚಾವ್ರೊ, ಬೇಟಿ ಪಡಾವ್ರೊ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ. ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಉತ್ತೇಜಿಸುವುದು, ಹೆಣ್ಣು ಭ್ರೂಣ ಹತ್ಯೆ ತಡೆಗಟ್ಟುವುದು, ಲಿಂಗ ತಾರತಮ್ಯ ಹೋಗಲಾಡಿಸುವುದು, ಹೆಣ್ಣು ಮಗುವಿಗೆ ಉಳಿವು ಮತ್ತು ಅವರ ರಕ್ಷಣೆಯನ್ನು ಖಾತ್ರಿಗೊಳಿಸುವುದು, ಹೆಣ್ಣು ಮಗುವಿಗೆ ಪ್ರಾಮುಖ್ಯತೆ ಮತ್ತು ಅವರ ಹಕ್ಕುಗಳ ಧನಾತ್ಮಕ ಸಂದೇಶವನ್ನು ನೀಡುವ ನಿಟ್ಟಿನಲ್ಲಿ ಈ ಯೋಜನೆಯನ್ನು ಜಾರಿಗೆ ತರಲಾಗಿದೆ. ಪ್ರಮುಖವಾಗಿ ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು. ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾದರೆ ಸಾಮಾಜಿಕ ಪಿಡುಗುಗಳಾದ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ ಎಂಬ ಅನಿಷ್ಟ ಪದ್ಧತಿಯಲ್ಲಿ ತೊಡಗಿಕೊಳ್ಳುತ್ತಾರೆ. ಬಾಲ್ಯ ವಿವಾಹ ಮತ್ತು ಬಾಲ ಕಾರ್ಮಿಕ ಪದ್ದತಿ ಶಿಕ್ಷಾರ್ಹ ಅಪರಾಧವಾಗಿದ್ದು ಇದನ್ನು ಪ್ರೋತ್ಸಾಹಿಸುವವರಿಗೆ ಕಠಿಣ ಶಿಕ್ಷೆ ಇದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರಾಂಶುಪಾಲರಾದ ಭೀಮರಾಯ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಸತಿ ಶಾಲೆಯ ನಿಲಯ ಪಾಲಕರು, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಇದ್ದರು.

### ತಂತ್ರ–ತಿರುವು ತಾಕತ್ತು: ಕವಿತಾಳ ಪಟ್ಟಣ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ 22ರಂದು ಚುನಾವಣೆ

ಯುವಮಾರ್ಗ ಸುದ್ದಿ

**ಕವಿತಾಳ ,ಡಿ.20–** ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಕವಿತಾಳ ಪಟ್ಟಣ ಪಂಚಾಯಿತಿಯಲ್ಲಿ ಅಧ್ಯಕ್ಷ ಕುರ್ಚಿಗಾಗಿ ರಾಜಕೀಯ ಕದನ ತೀವ್ರಗೊಂಡಿದೆ. ಡಿಸೆಂಬರ್ 22ರಂದು ಅಧ್ಯಕ್ಷರ ಆಯ್ಕೆಗೆ ದಿನಾಂಕ ನಿಗದಿಯಾಗುತ್ತಿದ್ದಂತೆ, ಪಟ್ಟಣದಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ತಂತ್ರ–ಪ್ರತಿತಂತ್ರಗಳ ಆಟ ಶುರುವಾಗಿದೆ.

ಹೊರಗೆ ಪರಸ್ಪರ ಒಪ್ಪಂದದ ಮಾತುಗಳನ್ನು ಆಡುತ್ತಿರುವ ರಾಜಕೀಯ ಪಕ್ಷಗಳು, ಒಳಗೊಳಗೆ ತಮ್ಮ ತಮ್ಮ ಗುಂಪುಗಳನ್ನು ಬಲಪಡಿಸುವ ಕಾರ್ಯದಲ್ಲಿ ತೊಡಗಿವೆ. ಅಧ್ಯಕ್ಷ ಸ್ಥಾನಕ್ಕಾಗಿ ರಾಜೇಶ್ವರಿ ತಿಪ್ಪಯ್ಯಸ್ವಾಮಿ ಅಧ್ಯಕ್ಷರಾಗುವ ಸಾಧ್ಯತೆ ಇದೆ.



ಯುವ ಮಾರ್ಗ

www.yuvamarga.com Yuva Marga yuva_marga_

## ಮೊದಲನೇಯ ಪುಟದಿಂದ

# ಪ್ರತಿ ಮಗುವಿಗೂ ಪಲ್ಸ್ ಪೋಲಿಯೊ ಲಸಿಕೆ ಸಿಗಬೇಕು

ಬೂತ್‌ಗಳ ಜೊತೆಗೆ 33 ಮೊಬೈಲ್ ತಂಡ ಹಾಗೂ 53 ಟ್ರಾನ್ಸಿಟ್ ತಂಡಗಳು ಕಾರ್ಯನಿರ್ವಹಿಸಲಿದ್ದು, 2436 ಸ್ವಯಂ ಸೇವಕರು ಪಲ್ಸ್ ಪೋಲಿಯೊ ಲಸಿಕೆ ಹಾಕುವ ಕಾರ್ಯದಲ್ಲಿ ಪಾಲ್ಗೊಳ್ಳಲಿದ್ದಾರೆ. ಅದನ್ನು ಮೇಲ್ವಿಚಾರಣೆ ಮಾಡಲು 248 ಮೇಲ್ವಿಚಾರಕರು ಕೆಲಸ ಮಾಡಲಿದ್ದಾರೆ. 2 ರೈಲ್ವೇ ಸ್ಟೇಷನ್ ಸೇರಿದಂತೆ ಜಿಲ್ಲೆಯ ಎಲ್ಲ ಆಸ್ಪತ್ರೆಗಳು, ಕೆಲ ಶಾಲೆಗಳು, ಸಾರ್ವಜನಿಕ ಸ್ಥಳಗಳಲ್ಲಿ ಲಸಿಕೆ ನೀಡಲು ಪ್ರದೇಶವನ್ನು ಗುರುತಿಸಲಾಗಿದೆ. ಈ ಸಂಬಂಧ ಎಲ್ಲಾ ಕಡೆ ಸಕ್ರಿಯವಾಗಿ ಲಸಿಕೆ ಹಾಕುವ ಸಿಬ್ಬಂದಿಗಳನ್ನು ನಿಯೋಜಿಸಿ ಲಸಿಕೆ ಹಾಕುವ ಕಾರ್ಯವನ್ನು ಸಮರ್ಪಕವಾಗಿ ಮಾಡಲಾಗುವುದೆಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಸ್ವಾಗತಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ವಿಜಯ ಶಂಕರ್, ಪಾಲಿಕೆ ಆರೋಗ್ಯಾಧಿಕಾರಿ ಡಾ.ಮಹಮ್ಮದ್ ಶಾಕೀರ್, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಗಣೇಶ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಕಾಂಬಳೆ, ಡೆಂಗೆ ನಿಯಂತ್ರಣಾಧಿಕಾರಿ ಡಾ.ಚಂದ್ರಶೇಖರಯ್ಯ ಸ್ವಾಮಿ, ರಾಯಚೂರು ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ್, ಜೆಸ್ಕಾಂನ ಎಇಇ ಶಿವನಗುತ್ತಿ, ಸಾರಿಗೆ ಇಲಾಖೆಯ ಅರ್ಜುನ್, ರಾಯಚೂರು ಸಿಡಿಪಿಒ ಮನಸೂರ್ ಅಹ್ಮದ್ ಸೇರಿದಂತೆ ಇತರರು ಇದ್ದರು.

# ರಾಜ್ಯದಲ್ಲಿರುವ ಅಕ್ರಮ ವಲಸಿಗರನ್ನು ಹೊರಗಟ್ಟುವಂತೆ ಸರ್ಕಾರಕ್ಕೆ ಅಶೋಕ್ ಆಗ್ರಹ

ಮತ್ತೊಂದು ಪೋಸ್ಟ್‌ನಲ್ಲಿ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಮಾಜಿ ಸಚಿವ ಕೆ.ಎನ್ ರಾಜಣ್ಣ ಅವರು ತಮ ಹಾಗು ತಮ ಕುಟುಂಬ ಸದಸ್ಯರ ಮೇಲೆ ಹನಿ ಟ್ರ್ಯಾಪ್ ಪ್ರಯತ್ನಗಳು ನಡೆದಿವೆ ಎಂದು ಸದನದ ಒಳಗೆ ಆರೋಪ ಮಾಡಿ ತನಿಖೆಗೆ ಆಗ್ರಹಿಸಿದ ನಂತರ ಈಗ ಮತ್ತೊಬ್ಬ ಕಾಂಗ್ರೆಸ್ ಸಚಿವ ತಮ ಹೆಸರಿಗೆ ಮಸಿ ಬಳಿಯಲು ಸ್ವಪಕ್ಷದವರಿಂದಲೇ ಷಡ್ಯಂತ್ರ ನಡೆಯುತ್ತಿದೆ ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ. ತಮ ಮೇಲೆ ಬಂದಿರುವ ಭೂಕಬಳಿಕೆ ಆರೋಪಗಳಿಗೆ ಸ್ವಪಕ್ಷದವರೇ ಕಾರಣ ಎಂದು ಹೇಳುವ ಮೂಲಕ ಕಂದಾಯ ಸಚಿವರು ಕಾಂಗ್ರೆಸ್ ಪಕ್ಷದಲ್ಲಿ ಎಗ್ಗಿಲ್ಲದೆ ನಡೆಯುತ್ತಿರುವ ಆಂತರಿಕ ಕಚ್ಚಾಟಕ್ಕೆ ಕನ್ನಡಿ ಹಿಡಿದಿದ್ದಾರೆ.

ಇಷ್ಟಕ್ಕೂ ಪದೇ ಪದೇ ಸಿಎಂ ಸಿದ್ದರಾಮಯ್ಯ ಅವರ ಗುಂಪಿನಲ್ಲಿ ಗುರುತಿಸಿಕೊಂಡಿರುವ ನಾಯಕರೇ ಈ ರೀತಿ ಟಾರ್ಗೆಟ್ ಆಗುತ್ತಿರುವುದು ಕಾಕತಾಳೀಯವೋ ಅಥವಾ ವ್ಯವಸ್ಥಿತ ಕುತಂತ್ರವೋ ಈ ಷಡ್ಯಂತ್ರದ ಹಿಂದಿರುವ ಮಹಾನಾಯಕ ಯಾರು ಎಂದು ಪ್ರಶ್ನಿಸಿದ್ದಾರೆ. ಕಾಂಗ್ರೆಸ್ ಪಕ್ಷದ ಆಂತರಿಕ ಕಚ್ಚಾಟದ ಬಗ್ಗೆ ನಮ ಪಕ್ಷಕ್ಕೆ ಯಾವುದೇ ಆಸಕ್ತಿಯಿಲ್ಲ. ಆದರೆ ಆಡಳಿತ ಪಕ್ಷವು ಈ ರೀತಿ ಆಂತರಿಕ ಕಚ್ಚಾಟದಲ್ಲಿ ಮುಳುಗಿ ಆಡಳಿತ ಮತ್ತು ಅಭಿವೃದ್ಧಿಯ ಮೇಲೆ ದುಷ್ಪರಿಣಾಮ ಬೀರುತ್ತಿರುವಾಗ ಅದರ ಬಗ್ಗೆ ದನಿ ಎತ್ತುವುದು ಜವಾಬ್ದಾರಿಯುತ ವಿಪಕ್ಷ ನಾಯಕನಾಗಿ ನನ್ನ ಜವಾಬ್ದಾರಿ. ಇದಕ್ಕೆ ಎಐಸಿಸಿ ಅಧ್ಯಕ್ಷ ಎಂ ಮಲ್ಲಿಕಾರ್ಜುನ ಖರ್ಗೆ ಹಾಗೂ ಲೋಕಸಭೆಯ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಉತ್ತರ ನೀಡಬೇಕು ಎಂದು ಅಶೋಕ್ ಒತ್ತಾಯಿಸಿದ್ದಾರೆ.

# ತಂತ್ರ-ತಿರುವು ತಾಕತ್ತು: ಕವಿತಾಳ ಪಟ್ಟಣ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ 22ರಂದು ಚುನಾವಣೆ

ಒಗ್ಗಟ್ಟಿನ ಘೋಷಣೆಗಳು ಕೇವಲ ಮಾತಿನ ಮಟ್ಟಕ್ಕೆ ಸೀಮಿತವಾಗಿವೆ ಎಂಬ ಆರೋಪಗಳು ಕೇಳಿಬರುತ್ತಿವೆ. ಕವಿತಾಳ ಪಟ್ಟಣ ಪಂಚಾಯಿತಿಯಲ್ಲಿ ಒಟ್ಟು 16 ಸದಸ್ಯರ ಬಲವಿದ್ದು, ಅಧ್ಯಕ್ಷ ಸ್ಥಾನಕ್ಕೆ ಬಹುಮತ ಸಾಧಿಸಲು ಕನಿಷ್ಟ 9 ಸದಸ್ಯರ ಬೆಂಬಲ ಅಗತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಸ್ಥಳೀಯ ಸದಸ್ಯರ ಜೊತೆಗೆ ಶಾಸಕರು ಹಾಗು ಲೋಕಸಭಾ ಸದಸ್ಯರ ಪಾತ್ರವೂ ನಿರ್ಣಾಯಕವಾಗಲಿದೆ ಎಂಬ ಲೆಕ್ಕಾಚಾರಗಳು ರಾಜಕೀಯ ವಲಯದಲ್ಲಿ ಜೋರಾಗಿ ನಡೆಯುತ್ತಿವೆ.

ಕೆಲ ಸದಸ್ಯರನ್ನು 'ಸುರಕ್ಷಿತ' ಸ್ಥಳಗಳಲ್ಲಿ ಇರಿಸುವ ಯತ್ನವೂ ನಡೆಯುತ್ತಿದೆ ಎಂಬ ಗುಸುಗುಸು ರಾಜಕೀಯ ವಲಯದಲ್ಲಿ ಹರಡಿದೆ.

ಜನಸೇವೆಯ ಹೆಸರಿನಲ್ಲಿ ಆಯ್ಕೆಯಾದ ಜನಪ್ರತಿನಿಧಿಗಳು ಇದೀಗ ಕುರ್ಚಿಗಾಗಿ ತೋರಿಸುತ್ತಿರುವ ಆಸಕ್ತಿ ಸಾರ್ವಜನಿಕ ವಲಯದಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ. ಅಭಿವೃದ್ಧಿ, ಮೂಲಸೌಕರ್ಯ, ಕುಡಿಯುವ ನೀರು, ಸ್ವಚ್ಛತೆ ಮುಂತಾದ ವಿಚಾರಗಳು ಹಿನ್ನೆಲೆಗೆ ಸರಿದಿದ್ದು, ಅಧಿಕಾರದ ಲೆಕ್ಕಾಚಾರವೇ ರಾಜಕೀಯದ ಕೇಂದ್ರಬಿಂದುವಾಗಿದೆ ಎಂಬ ಟೀಕೆಗಳು ಕೇಳಿಬರುತ್ತಿವೆ.ರಾಜಕೀಯ ವಿಶ್ಲೇಷಕರ ಪ್ರಕಾರ, ಕೊನೆಯ ಕ್ಷಣದಲ್ಲಿ ತಿರುವುಗಳು ಸಂಭವಿಸುವ ಸಾಧ್ಯತೆ ಹೆಚ್ಚಿದ್ದು, ತಂತ್ರ ತಾಕತ್ತಿನ ಆಟ ಇನ್ನಷ್ಟು ಗಂಭೀರವಾಗುವ ಲಕ್ಷಣಗಳಿವೆ. ಫಲಿತಾಂಶ ಯಾವ ದಿಕ್ಕು ತಾಳಲಿದೆ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಇಲ್ಲದೆ ಇರುವುದೇ ಈ ಚುನಾವಣೆಯ ವಿಶೇಷತೆ ಎನ್ನಲಾಗುತ್ತಿದೆ.

ಒಟ್ಟಿನಲ್ಲಿ, ಕವಿತಾಳ ಪಟ್ಟಣ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕಾಗಿ ನಡೆಯುತ್ತಿರುವ ಈ ಪೈಪೋಟಿ ರಾಜಕೀಯ ಕುತೂಹಲ ಹೆಚ್ಚಿಸಿದ್ದು, ಡಿಸೆಂಬರ್ 22ರಂದು ನಡೆಯಲಿರುವ ಚುನಾವಣೆ ಸ್ಥಳೀಯ ರಾಜಕಾರಣಕ್ಕೆ ಸ್ಪಷ್ಟ ದಿಕ್ಕು ನೀಡಲಿದೆ ಎಂಬ ನಿರೀಕ್ಷೆಯೊಂದಿಗೆ ಪಟ್ಟಣದ ಜನತೆ ಕಾದು ನೋಡುತ್ತಿದ್ದಾರೆ

# ಬೇಡಿಕೆಯಂತೆ ಮೆಕ್ಕಜೋಳ ಪೂರೈಸಲು ಸೂಚನೆ



**ಕೊಪ್ಪಳ ,ಡಿ.20**–ಪೌಲ್ಟ್ರಿ ಫೀಡ್, ಕೋಳಿ ಫಾರಂಗಳ ಮೂಲಕ ರೈತರ ಮೆಕ್ಕಜೋಳ ಖರೀದಿಸಲು ಜಿಲ್ಲೆಯ ಪ್ರತಿ ಕೋಳಿ ಫಾರಂಗಳ ಬೇಡಿಕೆಯಂತೆ ಪೂರೈಸಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಲಾಖೆ ಅಧಿಕಾರಿಗಳು, ರೈತರು ಹಾಗೂ ಕೋಳಿ ಫಾರ್ಮ್ ಮಾಲೀಕರ ಜೊತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು 'ಸರ್ಕಾರದ ಆದೇಶದಂತೆ 2025-26ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಮುಂಗಾರು ಹಂಗಾಮಿನಲ್ಲಿ ರೈತರು ಬೆಳೆದ ಮೆಕ್ಕೆಜೋಳವನ್ನು ಪ್ರತಿ ರೈತರಿಂದ 50 ಕ್ವಿಂಟಲ್ ಮೆಕ್ಕೆಜೋಳವನ್ನು ಪ್ರತಿ ಕ್ವಿಂಟಲ್‌ಗೆ 2400ರಂತೆ ಖರೀದಿ ಸಂಸ್ಥೆಯಾದ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ಮೂಲಕ ಖರೀದಿಸಬೇಕಾಗಿದೆ' ಎಂದರು.'ಕೋಳಿ ಫಾರಂಗಳ ಆಹಾರ ತಯಾರಿಕೆಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಮೆಕ್ಕೆಜೋಳವನ್ನು ಬಳಸಲಾಗುತ್ತದೆ. ಹಾಗಾಗಿ ಪ್ರಸಕ್ತ ಸಾಲಿನಲ್ಲಿ ಕೋಳಿ ಫಾರಂಗಳಿಗೆ ಅವಶ್ಯವಿರುವ ಒಟ್ಟಾರೆ ಬೇಡಿಕೆಯನ್ನು ನೀಡಬೇಕು' ಎಂದರು.ಕೋಳಿ ಫಾರಂ ಮಾಲೀಕರ ಪ್ರತಿನಿಧಿಗಳು ಮಾತನಾಡಿ ಒಟ್ಟು ಮೂರು ಸಾವಿರ ಮೆಟ್ರಿಕ್ ಟನ್ ಮೆಕ್ಕಜೋಳ ಬೆಂಬಲ ಬೆಲೆ ಯೋಜನೆಯಡಿ ಖರೀದಿಸುವುದಾಗಿ ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಜಿ.ಡಿ. ಕೃಷ್ಣಮೂರ್ತಿ, ಕೊಪ್ಪಳ ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕ ವಿ.ಜಿ. ಹಿರೇಮಠ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಪಾಲ್ಗೊಂಡಿದ್ದರು.

# ನೀಲಗಲ್‌ನಲ್ಲಿ ಜ.4 ರಿಂದ ಜ.13 ರವರೆಗೆ ಜಾತ್ರೆ ಸಾಮೂಹಿಕ ವಿವಾಹ, ಆರೋಗ್ಯ ತಪಾಸಣೆ ಸೇರಿ ವಿವಿಧ ಕಾರ್ಯಕ್ರಮ ಆಯೋಜನೆ.

ಯುವಮಾರ್ಗ ಸುದ್ದಿ

**ಅರಕೇರಾ,ಡಿ.20**–ತಾಲೂಕಿನ ನೀಲಗಲ್ ಶ್ರೀ ಶಾಂಭವಿ ಶಾಂತಮಲ್ಲೇಶ್ವರ ಜಾತ್ರಾ ಮಹೋತ್ಸವ ಜ.4 ರಿಂರ ಜ.13 ರವರೆಗೆ ಜರುಗಲಿದೆ ಎಂದು ಶ್ರೀಮಠದ ಪೀಠಾಧಿಪತಿ ಡಾ.ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ ಪತ್ರಿಕಾ ಪ್ರಕಟಣೆಯಲ್ಲಿ ಸೋಮವಾರ ತಿಳಿಸಿದ್ದಾರೆ.

ಲೋಕ ಕಲ್ಯಾಣಾರ್ಥವಾಗಿ ಜ.4 ರಂದು ಮಹಾ ಚಂಡಿಕಾ ಯಾಗ, ಪ್ರತಿ ನಿತ್ಯ ಸಂಜೆ 6 ಗಂಟೆಯಿಂದ ಪುರಾಣ ಪ್ರವಚನ, ಜ.9 ರಂದು ಬೆ.9 ಗಂಟೆಯಿಂದ ಉಚಿತ ಆರೋಗ್ಯ ಶಿಬಿರ, ಬೆ.10 ಗಂಟೆಗೆ ಗುರು ಆರಾಧನೆ ಮತ್ತು ಅಯ್ಯಾಚಾರ, ಸಂಜೆ 5 ಗಂಟೆಗೆ ಮಹಿಳೆಯರಿಂದ ಉಚ್ಛಾಯ ರಥೋತ್ಸವ ನಂತರ ದೀಪೋತ್ಸವ ನಡೆಯಲಿದೆ. ಜ.10 ರಂದು ಬೆ.8 ಗಂಟೆಗೆ ಭಕ್ತಾದಿಗಳಿಂದ ಶ್ರೀ ಶಾಂಭವಿ ದೇವಿ ಅಮ್ಮನವರಿಗೆ ಉಡಿ ತುಂಬುವ ಕಾರ್ಯಕ್ರಮ, ಬೆ.11.30 ಕ್ಕೆ ಸಾಮೂಹಿಕ ವಿವಾಹ, ಸಂಜೆ 5 ಗಂಟೆಗೆ ಮಹಾರಥೋತ್ಸವ ಜರುಗಲಿದೆ. ಜ.11 ಕ್ಕೆ ಬೆ.9 ಗಂಟೆಗೆ ಎತ್ತುಗಳಿಂದ ಭಾರ ಎಳೆಯುವ ಸ್ಪರ್ಧೆ, ಸಂಜೆ 5.30 ಕ್ಕೆ ಕಡುಬಿನ ಕಾಳಗ, ಜ.12 ರಂದು ಬೆ.7 ಗಂಟೆಗೆ ಮಹಾ ಚಂಡಿಕಾ ಯಾಗ ಪೂರ್ಣಾಹುತಿ, ಸಂಜೆ 6 ಗಂಟೆಗೆ ಮಕ್ಕಳಿಂದ ನೃತ್ಯೋತ್ಸವ, ಜ.13 ರಂದು ಸಂಜೆ 6 ಗಂಟೆಯಿಂದ ಹಾಸ್ಯ ಸಂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಸಾಮೂಹಿಕ ವಿವಾಹಕ್ಕೆ ಈಗಾಗಲೇ ನೋಂದಣಿ ಕಾರ್ಯ ಶುರುವಾಗಿದ್ದು, ವಯಸ್ಸಿನ ಪ್ರಮಾಣ ಪತ್ರ, ಶಾಲಾ ವರ್ಗಾವಣೆ ಪ್ರಮಾಣ ಪತ್ರ, ಭಾವಚಿತ್ರವಿರುವ ಶಾಲಾ ದೃಢಿಕರಣ ಪತ್ರ, ಜಾತಿ ಮತ್ತು ಆದಾಯ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಚುನಾವಣೆ ಗುರುತಿನ ಚೀಟಿ, ಪಡಿತರ ಚೀಟಿ, 4 ಭಾವಚಿತ್ರ, 2 ಲಗ್ನ ಪತ್ರಿಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 9448248888, 9741999401 ಗೆ ಸಂಪರ್ಕಿಸಲು ಕೋರಿದ್ದಾರೆ.

# ಮಾನವೀಯತೆಯ ಮೌಲ್ಯಗಳನ್ನು ಎತ್ತಿ ಹಿಡಿಯುವ ಕರುಣೆಯ ಕುಟುಂಬವಾಗಿದೆ ಕಾರುಣ್ಯ ಆಶ್ರಮ :ಕೆ. ವೀರೇಶ



ಯುವಮಾರ್ಗ ಸುದ್ದಿ

**ಸಿಂಧನೂರು,ಡಿ.20**– ಪ್ಯಾಂಟೆರಾ ಅಗ್ರಿ ಸೈನ್ಸ್ ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ವತಿಯಿಂದ ಸಂಸ್ಥಾಪಕರಾದ ಲೋಕನಾಥನ್ ಗಿರಿಧರನ್ ಹಾಗೂ ನಿರ್ದೇಶಕರಾದ ಪ್ರಮೋದ್ ಕಡುಕೋಳ ಇವರುಗಳ ಆಶಯದಂತೆ ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ " ನೊಂದ ಜೀವಿಗಳ ನಾಡಿಮಿಡಿತ"ಎನ್ನುವ ವಿಶೇಷ ಕಾರ್ಯಕ್ರಮದಡಿಯಲ್ಲಿ ಆಶ್ರಮದಲ್ಲಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಈ ಸಂಸ್ಥೆಯ ಸಂಸ್ಥಾಪಕರ ಹಾಗೂ ನಿರ್ದೇಶಕರ ಜನ್ಮ ಸಾರ್ಥಕ ದಿನವನ್ನು ನೆರವೇರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಪ್ಯಾಂಟೇರಾ ಅಗ್ರಿ ಸೈನ್ಸಸ್ ನ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನ ಜಡ್ ಎಸ್ ಎಮ್ ಗಳಾದ ಕೆ. ವೀರೇಶ ಮಾತನಾಡಿ ನಮ್ಮ ಸಂಸ್ಥೆಯ ಸ್ಥಾಪಕರು ಹಾಗೂ ನಿರ್ದೇಶಕರು ನೆಲೆ ಇಲ್ಲದ ಜೀವಿಗಳ ಬಗ್ಗೆ ಅನಾಥರ ಬಗ್ಗೆ ಬಹಳ ಆಸಕ್ತಿ ಹೊಂದಿದಂತಹ ಇವರುಗಳಿಗೆ ಕಾರುಣ್ಯ ಆಶ್ರಮದ ಹಿರಿಯರ ಹಾಗೂ ವಯಸ್ಕರ ಬುದ್ಧಿಮಾಂಧ್ಯರ ಆಶೀರ್ವಾದ ಸದಾವಕಾಲವಿರಲಿ. ನಮ್ಮ ಚನ್ನಬಸಯ್ಯ ಸ್ವಾಮಿಯವರು ನಿರಂತರ ತಮ್ಮ ಜೋಳಿಗೆಯಿಂದ ಸುಮಾರು ವರ್ಷಗಳಿಂದ ಅನಾಥರಿಗೆ ಆಶ್ರಯ ಕಲ್ಪಿಸಿ ಮತ್ತು ಅನೇಕ ಹಲವಾರು ಜಾಗೃತಿಗಳ ಮೂಲಕ ಸಮಾಜವನ್ನು ಶುದ್ಧೀಕರಿಣ ಮಾಡುವಂತಹ ಕಾರ್ಯಕ್ಕೆ ಮುಂದಾಗಿರುವುದು ನಮ್ಮ ಭಾರತೀಯ ಸಂಸ್ಕೃತಿಗೆ ಹೆಮ್ಮೆಯ ವಿಷಯವಾಗಿದೆ.

ಮನುಕುಲದ ಮಾನವೀಯತೆಯ ಮಂದಿರವಾಗಿದೆ ಈ ನಮ್ಮ ಕಾರುಣ್ಯ ಆಶ್ರಮ. ಇಂತಹ ಮಂದಿರದಲ್ಲಿ ಆಶ್ರಯ ಪಡೆದಿರುವವರು ಶರಣ ಸ್ವರೂಪಿಗಳು ದೇವರ ಸಮಾನರು ಮಾನವೀಯತೆ ಮೌಲ್ಯಗಳನ್ನು ಎತ್ತಿ ಹಿಡಿಯುವ ಕರುಣೆಯ ಕುಟುಂಬವಾಗಿದೆ ಕಾರುಣ್ಯ ಆಶ್ರಮ ಈ ಆಶ್ರಮಕ್ಕೆ ನಮ್ಮ ಕಂಪನಿಯು ಕೈ ಜೋಡಿಸುತ್ತದೆ. ಎಂದು ಮಾತನಾಡಿದರು ನಂತರ ಇವರನ್ನು ಆಶ್ರಮದವತಿಯಿಂದ ಸನ್ಮಾನಿಸಿ ಗೌರವಿಸಿ ಸಿದ್ದಗಂಗಾ ಶ್ರೀಗಳ ಭಾವಚಿತ್ರವನ್ನು ನೆನಪಿನ ಕಾಣಿಕೆಯಾಗಿ ವಿತರಿಸಲಾಯಿತು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪ್ಯಾಂಟೆರಾ ಅಗ್ರಿ ಸೈನ್ಸ್ ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ನ ಪದಾಧಿಕಾರಿಗಳಾದ ನರೇಂದ್ರ. ವಿರೂಪಾಕ್ಷಪ್ಪ ಮಾನವಿ. ಪಾಲಾಕ್ಷಿ. ರಮೇಶ. ರಾಘವೇಂದ್ರರಾಜ. ನರೇಂದ್ರ ಹಾಗೂ ಆಶ್ರಮದ ಆಡಳಿತಾಧಿಕಾರಿಗಳಾದ ಅವಿನಾಶ ದೇಶಪಾಂಡೆ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯ ಸ್ವಾಮಿ ಹಿರೇಮಠ. ಶ್ರೀಮಠ ಸೇವಾ ಟ್ರಸ್ಟ್ ನ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ.. ಜ್ಯೋತಿ. ಅನೇಕರು ಉಪಸ್ಥಿತರಿದ್ದರು

# ವಿಕಲಚೇತನರು ಕೀಳುರಿಮೆಗೆ ಒಳಗಾಗುವುದು ಬೇಡ: ನ್ಯಾಯಾಧೀಶ ರಾಮಮೂರ್ತಿ



ಯುವಮಾರ್ಗ ಸುದ್ದಿ

**ತಾಳಿಕೋಟಿ,ಡಿ.20**– ಅಂಗವೈಕಲ್ಯ ಎಂಬುದು ಶಾಪವೂ ಅಲ್ಲ, ಪಾಪದ ಫಲವೂ ಅಲ್ಲ. ಅದು ಹುಟ್ಟಿನಿಂದ,ವೈಜ್ಞಾನಿಕ ಕಾರಣಗಳಿಂದ ಅಥವಾ ಬದುಕಿನಲ್ಲಿ ನಡೆಯುವ ಆಕಸ್ಮಿಕ ಘಟನೆಗಳಿಂದ ಸಂಭವಿಸಿರುತ್ತದೆ, ಆದರೆ ಸಮಾಜ ಇದನ್ನು ಶಾಪದ ದೃಷ್ಟಿಯಲ್ಲಿ ನೋಡುವುದು ಅಥವಾ ಕೀಳಾಗಿ ಕಾಣುವುದು ಸರಿಯಲ್ಲ ಎಂದು ಸಿವಿಲ್ ನ್ಯಾಯಾಧೀಶ ಹಾಗೂ ಮುದ್ದೇಬಿಹಾಳ ತಾಲೂಕ ಕಾನೂನು ಸೇವೆಗಳ ಸಮಿತಿ ಸದಸ್ಯ ಕಾರ್ಯದರ್ಶಿ ರಾಮಮೂರ್ತಿ ಎನ್. ಹೇಳಿದರು. ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ ಮುದ್ದೇಬಿಹಾಳ, ತಾಲೂಕು ಪಂಚಾಯತ್ ಹಾಗು ಇತರ ಎಲ್ಲ ಸರಕಾರಿ ಇಲಾಖೆಗಳು ತಾಳಿಕೋಟಿ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ತಾಪಂ ಸಭಾಭವನದಲ್ಲಿ ಹಮ್ಮಿಕೊಂಡ ವಿಕಲಚೇತನರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಸಂವಿಧಾನದಲ್ಲಿ ಎಲ್ಲರಿಗೂ ಸಮಾನ ಅವಕಾಶ ಮತ್ತು ಹಕ್ಕುಗಳನ್ನು ನೀಡಲಾಗಿದೆ ಇದಕ್ಕೆ ವಿಶೇಷ ಚೇತನರೂ ಹೊರತಾಗಿಲ್ಲ, ಸರ್ಕಾರದ ವಿವಿಧ ಇಲಾಖೆ ಹುದ್ದೆಗಳ ನೇಮಕಾತಿಯಲ್ಲಿ ಅವರಿಗೆ ವಿಶೇಷ ಮೀಸಲಾತಿ ಒದಗಿಸಲಾಗಿದೆ ಅದನ್ನು ಅವರು ಪಡೆದುಕೊಳ್ಳಲು ಪ್ರಯತ್ನಿಸಬೇಕು. ಈ ಕುರಿತು ಅವರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಇದಾಗಿದೆ ಎಂದರು. ತಹಸಿಲ್ದಾರ್ ಡಾ.ವಿನಯಾ ಹೂಗಾರ ಮಾತನಾಡಿ ವಿಕಲ ಚೇತನರಿಗೆ ಕೇವಲ ಅನುಕಂಪ ತೋರಿದರೆ ಸಾಲದು ಅವರಲ್ಲಿ ಆತ್ಮಸ್ಥೈರ್ಯ ತುಂಬುವುದರ ಜೊತೆಗೆ ಅವರಿಗೆ ಶಿಕ್ಷಣ ಉದ್ಯೋಗ ಮತ್ತು ಗೌರವಯುತ ಜೀವನ ಒದಗಿಸುವುದು ಸಮಾಜದ ನೈತಿಕ ಹೊಣೆಗಾರಿಕೆ ಯಾಗಿದೆ. ನಮ್ಮ ಸಮಾಜದಲ್ಲಿ ವಿಕಲಚೇತನ ಯುವಕರ ದೊಡ್ಡ ಸಂಖ್ಯೆ ಇದೆ ಅವರಲ್ಲಿ ಬದುಕಿನ ಭರವಸೆ ಮೂಡಿಸಿ ಮುಖ್ಯ ವಾಹಿನಿಗೆ ತರುವ ಕಾರ್ಯವಾಗಬೇಕಾಗಿದೆ.

ವಿಕಲಚೇತನರೂ ಕೀಳುರಿಮೆಯಿಂದ ಹೊರ ಬಂದು ಆತ್ಮಸ್ಥೈರ್ಯ ಬೆಳೆಸಿಕೊಂಡು ಅವಕಾಶಗಳನ್ನು ಸದುಪಯೋಗ ಮಾಡಿಕೊಳ್ಳಬೇಕು. ತಾಲೂಕ ಆಡಳಿತವು ಇದಕ್ಕಾಗಿಯೇ ಕುಂದು ಕೊರತೆಗಳ ಸಭೆಗಳನ್ನು ನಡೆಸುತ್ತಿದ್ದು ವಿಶೇಷ ಚೇತನರು ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು. ಮುದ್ದೇಬಿಹಾಳ ನ್ಯಾವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ್ ಮಾಲಗತ್ತಿ, ಎಂ ಆರ್ ಡಬ್ಲ್ಯೂ ತಾಲೂಕ ಪಂಚಾಯತ್ ಎಸ್.ಕೆ.ಘಾಟಿ ಮಾತನಾಡಿದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಅನಸೂಯಾ ಚಲವಾದಿ ಅಧ್ಯಕ್ಷತೆ ವಹಿಸಿ ಮಾತನಾಡಿ ಸರ್ಕಾರದಿಂದ ವಿಕಲಚೇತನರಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತರಲಾಗಿದೆ ಯೋಜನೆಗಳನ್ನು ಸದುಪಯೋಗ ಪಡಿಸಿಕೊಳ್ಳಬೇಕು.

ವಿಕಲಚೇತನರ ಹಕ್ಕುಗಳು ಘನತೆ ಮತ್ತು ಯೋಗಕ್ಷೇಮದ ಬಗ್ಗೆ ಅರಿವು ಮೂಡಿಸಲು ಇಂತಹ ಕಾರ್ಯಕ್ರಮಗಳ ಅಗತ್ಯವಿದೆ ಎಂದರು. ಕಾರ್ಯಕ್ರಮದಲ್ಲಿ ಮುದ್ದೇಬಿಹಾಳ ತಾಲೂಕು ಅಂಗವಿಕಲರ ಕ್ಷೇಮಾಭಿವೃದ್ಧಿ ಸಂಸ್ಥೆ, ಅಧ್ಯಕ್ಷ ಸಂಗಣ್ಣ ಹುಣಶ್ಯಾಳ, ತಾಲೂಕ ಅಂಗವಿಕಲರ ಒಕ್ಕೂಟದ ಅಧ್ಯಕ್ಷ ಎ.ಪಿ.ಕೊಡಗಾನೂರ,ಎ.ಡಿ.ಪಿ. ಆರ್. ಬಿ.ಎಂ.ಸಾಗರ, ಸಹಾಯಕ ಲೆಕ್ಕಾಧಿಕಾರಿ ಬಸನಗೌಡ ಚೌದ್ರಿ,ಎ.ಡಿ.ನರೇಗಾ ಪಿ.ಎಸ್. ಕಸನಕ್ಕಿ, ಮಹಾಂತಗೌಡ ದೊರೆಗೋಳ ಹಾಗೂ ತಾಪಂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಇಂದಿನಿಂದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ

**ತುರುವೇಕೆರೆ, ಡಿ. 20–** ಮಕ್ಕಳ ದೈಹಿಕ, ಮಾನಸಿಕ ಆರೋಗ್ಯದ ಹಿತದೃಷ್ಟಿಯಿಂದ ಭಾರತಾದ್ಯಂತ ಇಂದಿನಿಂದ ಡಿ. 24ರವರೆಗೆ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ತುರುವೇಕೆರೆ ತಾಲ್ಲೂಕಿನಲ್ಲೂ ಅಭಿಯಾನ ನಡೆಯಲಿದ್ದು, ತಾಲ್ಲೂಕಿನ ಜನತೆ, ಪೋಷಕರು 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ಪಲ್ಸ್ ಪೊಲೀಯೋ ಲಸಿಕೆ ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ತಹಶೀಲ್ದಾರ್ ಕುಂಇ ಅಹಮದ್ ಮನವಿ ಮಾಡಿದರು.

ಇಲ್ಲಿನ ತಾಲ್ಲೂಕು ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2014ರಲ್ಲಿ ಪೊಲಿಯೋ ಮುಕ್ತ ಭಾರತ ಎಂದು ವಿಶ್ವ ಆರೋಗ್ಯ ಸಂಸ್ಥೆಯಿಂದ ದೃಢೀಕರಣವನ್ನು ಪಡೆದಿದ್ದೇವೆ. ಆರೋಗ್ಯವಂತ ಸಮಾಜವನ್ನು ನಿರ್ಮಾಣ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರದ ಆರೋಗ್ಯ ಇಲಾಖೆ, ಜಿಲ್ಲೆ ಹಾಗೂ ತಾಲ್ಲೂಕು ಆರೋಗ್ಯ ಇಲಾಖೆ ವತಿಯಿಂದ ಡಿಸೆಂಬರ್ 21 ರಿಂದ 24ರವರೆಗೆ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ತಾಲ್ಲೂಕಿನಲ್ಲಿ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವುದಕ್ಕಾಗಿ 90 ಬೂತ್ (ಕೇಂದ್ರ)ಗಳನ್ನು ಗುರುತಿಸಲಾಗಿದೆ. ಸೊನ್ನೆಯಿಂದ 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಹನಿ ಹಾಕಿಸುವ ಮೂಲಕ ತಾಲ್ಲೂಕಿನ ಯಾವುದೇ ಮಕ್ಕಳು ಅಂಗವೈಕಲ್ಯಕ್ಕೆ ತುತ್ತಾಗದಂತೆ ನೋಡಿಕೊಳ್ಳುವ ಉದ್ದೇಶ ನಮ್ಮದಾಗಿದೆ ಎಂದರು.

ತಾಲ್ಲೂಕಿನಲ್ಲಿ ಸೊನ್ನೆಯಿಂದ 5 ವರ್ಷದೊಳಗಿನ ಸುಮಾರು 9533 ಮಕ್ಕಳಿದ್ದು, ತುರುವೇಕೆರೆ ಪಟ್ಟಣದಲ್ಲಿ 1189, ಗ್ರಾಮೀಣ



ಪ್ರದೇಶದಲ್ಲಿ 8344 ಮಕ್ಕಳಿದ್ದಾರೆ.

ಶೇ.100 ರಷ್ಟು ಪಲ್ಸ್ ಪೋಲಿಯೋ ಲಸಿಕೆ ಹಾಕುವ ಗುರಿಯನ್ನು ಹೊಂದಲಾಗಿದೆ. ಇಂದಿನಿಂದ ಈ ಕಾರ್ಯದಲ್ಲಿ ಕಂದಾಯ ಇಲಾಖೆ, ಆರೋಗ್ಯ ಇಲಾಖೆ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಸೇರಿದಂತೆ ಸ್ವಯಂ ಸೇವಕರು ಪ್ರತಿ ಮನೆ ಮನೆಗೆ ಭೇಟಿ ನೀಡಿ ಮಕ್ಕಳಿಗೆ ಲಸಿಕೆ ಹಾಕುವ ಕಾರ್ಯದಲ್ಲಿ ತೊಡಗಲಿದ್ದಾರೆ.

ವಿಶೇಷವಾಗಿ ತಾಲ್ಲೂಕಿನ ನಾಲ್ಕು ಕಡೆ ಟ್ರಾನ್ಸಿಸ್ಟರ್ ಬೂತ್‌ಗಳನ್ನು ಸ್ಥಾಪಿಸಿದ್ದು, ತಾಲ್ಲೂಕಿನ ಬಾಣಸಂದ್ರದ ರೈಲ್ವೆ ನಿಲ್ದಾಣ, ಅಮ್ಮಸಂದ್ರದ ರೈಲ್ವೆ ನಿಲ್ದಾಣ, ಮಲ್ಲಾಘಟ್ಟದ ಶ್ರೀ ಗಂಗಾಧರೇಶ್ವರ ದೇವಸ್ಥಾನ, ತುರುವೇಕೆರೆ ಸಾರಿಗೆ ಬಸ್ ನಿಲ್ದಾಣದಲ್ಲಿ ಆರೋಗ್ಯ ಇಲಾಖಾ ಸಿಬ್ಬಂದಿ ಉಪಸ್ಥಿತರಿದ್ದು ಅಲ್ಲಿ ಬರುವ ಪ್ರಯಾಣಿಕರು, ಪ್ರವಾಸಿಗರ 5 ವರ್ಷದೊಳಗಿನ ಮಕ್ಕಳಿಗೆ ಪಲ್ಸ್ ಪೋಲಿಯೋ ಹನಿ ಹಾಕಲು ಸಿದ್ಧರಿರುತ್ತಾರೆ ಎಂದರು.

ತಾಲ್ಲೂಕು ಆರೋಗ್ಯ ವೈದ್ಯಾಧಿಕಾರಿ ಡಾ.ರಂಗನಾಥ್ ಮಾತನಾಡಿ, ಇಂದಿನಿಂದ ಡಿಸೆಂಬರ್ 24ರವರೆಗೆ ಪಲ್ಸ್ ಪೋಲಿಯೋ ಲಸಿಕೆ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಪ್ರತಿದಿನ ಬೆಳಿಗ್ಗೆ 8 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಪಲ್ಸ್ ಪೋಲಿಯೋ ಹನಿ ಹಾಕುವ ಕಾರ್ಯ ನಡೆಯಲಿದೆ. ಸೊನ್ನೆಯಿಂದ 5 ವರ್ಷದೊಳಗಿನ ಮಕ್ಕಳನ್ನು ತಾಯಂದಿರು ಇಂದಿನಿಂದ– ಬೂತ್‌ಗಳಿಗೆ ಕರೆತಂದು ಕಡ್ಡಾಯವಾಗಿ ಲಸಿಕೆ ಹಾಕಿಸುವ ಮೂಲಕ ಮಕ್ಕಳು ಪೋಲಿಯೋ ಕಾಯಿಲೆಗೆ ತುತ್ತಾಗದಂತೆ ನೋಡಿಕೊಳ್ಳಬೇಕು. ಡಿಸೆಂಬರ್ 22 ರಿಂದ 24ರವರೆಗೆ ಮನೆ ಮನೆ ಅಭಿಯಾನ ನಡೆಯಲಿದ್ದು, ಆರೋಗ್ಯ ಇಲಾಖೆ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಮನೆಮನೆಗೆ ಭೇಟಿ ನೀಡಿ ಲಸಿಕೆ ಪಡೆಯದ ಮಕ್ಕಳಿಗೆ ಸ್ಥಳದಲ್ಲೇ ಲಸಿಕೆ ಹಾಕಲಿದ್ದಾರೆ. ಪಟ್ಟಣದಲ್ಲಿ ಡಿಸೆಂಬರ್ 24 ರವರೆಗೆ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಡಿಸೆಂಬರ್ 22 ಹಾಗೂ 23 ರಂದು ಮನೆ ಮನೆ ಭೇಟಿ ಕಾರ್ಯಕ್ರಮವಿದ್ದು, ಪೋಷಕರು ತಪ್ಪದೇ ಮಕ್ಕಳಿಗೆ ಲಸಿಕೆ ಹಾಕಿಸಬೇಕು ಎಂದರು. ಪತ್ರಿಕಾಗೋಷ್ಠಿಯಲ್ಲಿ ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿ ಶ್ರೀನಾಥ್ ಬಾಬು ಉಪಸ್ಥಿತರಿದ್ದರು.

## ಕನ್ನಡ, ಸವಾಲುಗಳನ್ನು ಮೆಟ್ಟಿ ನಿಲ್ಲುವ ಭಾಷೆ : ನಾಡೋಜ ಬರಗೂರು ರಾಮಚಂದ್ರಪ್ಪ



**ಹೈದರಾಬಾದ್: ಡಿ,20:** ಹೈದರಾಬಾದಿನ ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗ ಹಾಗೂ ಸುಭಾಶ್ಚಂದ್ರ ಪಾಟೀಲ ಸ್ಮಾರಕ ಜನಕಲ್ಯಾಣ ಟ್ರಸ್ಟ್, ಪಾಳಾ ಕಲಬುರ್ಗಿ ಇವರ ಸಂಯುಕ್ತ ಆಶ್ರಯದಲ್ಲಿ "ಒಳನಾಡು–ಹೊರನಾಡು : ಕನ್ನಡ ಸ್ಥಿತಿಗತಿ" ವಿಷಯದ ಕುರಿತು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ನಾಡೋಜ ಬರಗೂರು ರಾಮಚಂದ್ರಪ್ಪ ಅವರು ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ ಮಾತನಾಡಿ,

ಕನ್ನಡಕ್ಕೆ ಸಾವಿರಾರು ವರ್ಷಗಳ ಚರಿತ್ರೆಯಿರುವಂತೆ ಅನೇಕ ಸವಾಲುಗಳೂ ಇವೆ. ಆದರೆ ಅಂತಃಶಕ್ತಿಯಿಂದ ಕೂಡಿದ ಭಾಷೆಯಾಗಿರುವ ಕಾರಣ ಎಲ್ಲ ಸವಾಲುಗಳನ್ನು ಮೆಟ್ಟಿ ಆಧುನಿಕವಾಗಿ ಅದು ಜೀವಂತವಾಗಿ ಉಳಿದಿದೆ. ಕಾಲಕ್ಕೆ ತಕ್ಕಂತೆ ತೆರೆದುಕೊಂಡು ತನ್ನ ಕಾರ್ಯವ್ಯಾಪ್ತಿಯನ್ನು ವಿಸ್ತರಿಸಿಕೊಂಡಿದೆ ಎಂದು ಅವರು ಹೇಳಿದರು.

ಕರ್ನಾಟಕದ ಒಳನಾಡಿನಲ್ಲಿರುವ ಕನ್ನಡಿಗರ ಸ್ಥಿತಿಗತಿ ಹಾಗೂ ಕರ್ನಾಟಕದ ಹೊರನಾಡಿನಲ್ಲಿರುವ ಕನ್ನಡಿಗರ ಬದುಕಿನ ಸ್ಥಿತಿಗತಿಗಳ ನಡುವೆ ಮಹತ್ತರ ಅಜಗಜಾಂತರ ವ್ಯತ್ಯಾಸಗಳಿವೆ. ಅವರ ಅಡ್ಡಿ–ಆತಂಕಗಳೂ ವಿಭಿನ್ನವಾಗಿವೆ. ಆದ್ದರಿಂದ ಒಂದೇ ಸರಳ ರೇಖೆಯಲ್ಲಿ ಇವರ ಜೀವನ ವಿಧಾನವನ್ನು ಕನ್ನಡದ ಸಂದರ್ಭದಲ್ಲಿ ವಿವರಿಸುವುದು ಕಷ್ಟಕರವೆಂದು ಅಭಿಪ್ರಾಯಪಟ್ಟರು.

ಭಾರತದ ಇತರೆ ರಾಜ್ಯಗಳಿಗಿಂತ ಕರ್ನಾಟಕದಲ್ಲಿ ಭಾಷಾ ಸಂಬಂಧಿತ ಚಟುವಟಿಕೆಗಳು ಹೆಚ್ಚಾಗಿ ನಡೆಯುತ್ತಿರುವುದು ಸಂತಸದ ಸಂಗತಿ. ಕನ್ನಡ ಭಾಷೆ ಹಾಗೂ ಸಂಸ್ಕೃತಿಯ ಸಂವರ್ಧನೆಗಾಗಿ ಸರ್ಕಾರವೇ ಅನೇಕ ಪ್ರಾಧಿಕಾರಗಳು, ಅಕಾಡೆಮಿಗಳು, ಪ್ರತಿಷ್ಠಾನಗಳು, ಟ್ರಸ್ಟ್‌ಗಳನ್ನು ಸ್ಥಾಪಿಸಿ ಕಾರ್ಯನಿರ್ವಹಿಸುತ್ತಿದೆ. ಹೀಗಾಗಿ ಒಳನಾಡಿನಲ್ಲಿ ಕನ್ನಡ ಸಾಯುತ್ತದೆ ಎಂಬ ಮಾತನ್ನು ನಾನು ನಿರಾಕರಿಸುತ್ತೇನೆ. ಕನ್ನಡ ತನ್ನ ಅಂತಃಶಕ್ತಿಯಿಂದಲೇ ಎಲ್ಲ ಸವಾಲುಗಳನ್ನು ಎದುರಿಸಿ ಕಾಲಕ್ಕೆ ತಕ್ಕಂತೆ ಸಾಗುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಉಸ್ಮಾನಿಯಾ ವಿಶ್ವವಿದ್ಯಾಲಯದ ಕಲಾ ವಿಭಾಗದ ಪ್ರಾಂಶುಪಾಲರಾದ ಪ್ರೊ. ಸಿ. ಕಾಶಿಂ ಅವರು ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು. ತಂತ್ರಜ್ಞಾನದಿಂದಾಗಿ ಎದುರುಬದುರು ಕುಳಿತರೂ ಮಾತನಾಡಲಾರದ ಸ್ಥಿತಿಗೆ ನಾವು ತಲುಪಿದ್ದೇವೆ. ಇಂತಹ ಸಂದರ್ಭದಲ್ಲಿ ಭಾಷೆ ನಮ್ಮ ಬದುಕನ್ನು ಹೇಗೆ ರೂಪಿಸಿದೆ ಎಂಬುದರ ಕುರಿತು ಆತ್ಮಾವಲೋಕನ ಅಗತ್ಯವಿದೆ ಎಂದರು.

ಡಾ. ಶಾಂತಾದೇವಿ ಸಣ್ಣೆಲಪ್ಪನವರ ಅವರು ಮೂಲತಃ ಕನ್ನಡದಲ್ಲಿ ರಚಿಸಿರುವ ಕೃತಿಯನ್ನು ಶ್ರೀರಾಮ ಕೃಷ್ಣಮೂರ್ತಿ ಅವರು "ನ ಹಿ ಯೋಗೇನ ಸದೃಶ್ಯಂ" ಎಂಬ ಹೆಸರಿನಲ್ಲಿ ತೆಲುಗು ಭಾಷೆಗೆ ಅನುವಾದ ಗೊಳಿಸಿದ್ದಾರೆ. ಸದರಿ ಕೃತಿಯನ್ನು ಉಸ್ಮಾನಿಯಾ ವಿಶ್ವವಿದ್ಯಾಲಯದ ತೆಲುಗು ವಿಭಾಗದ ಮುಖ್ಯಸ್ಥರಾದ ಪ್ರೊ. ಎಸ್. ಕಮಲಾಕರ ಶರ್ಮಾ ಅವರು ಪರಿಚಯಿಸಿದರು.

ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಎಂ. ಲಿಂಗಪ್ಪ ಗೋನಾಲ ಅವರು ಎಲ್ಲರನ್ನು ಸ್ವಾಗತಿಸಿ, ಪ್ರಾಸ್ತಾವಿಕ ನುಡಿಗಳನ್ನಾಡಿದರು. "ಒಳನಾಡು–ಹೊರನಾಡು ಕನ್ನಡದ ಸ್ಥಿತಿಗತಿ" ವಿಷಯದ ಸಂವಾದದಲ್ಲಿ ಪ್ರೊ. ನಿಖಿಲ ಹೆಚ್.ಎಸ್., ಸುಧೀಂದ್ರ ಕುಲಕರ್ಣಿ, ಸುರೇಂದ್ರ ಕಟಗೇರಿ, ಧರ್ಮೇಂದ್ರ ಪೂಜಾರಿ, ಸುಮತಿ ನಿರಂಜನ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಟ್ರಸ್ಟ್ ಅಧ್ಯಕ್ಷ ಶರಣಗೌಡ ಪಾಟೀಲ ಪಾಳಾ ಅವರು ಅಧ್ಯಕ್ಷೀಯ ಭಾಷಣ ಮಾಡುತ್ತಾ, ಭವಿಷ್ಯದಲ್ಲಿ ಹೈದರಾಬಾದಿನ ಕನ್ನಡಿಗರು ಹಮ್ಮಿಕೊಳ್ಳುವ ಯಾವುದೇ ಸಾಹಿತ್ಯದ ಚಟುವಟಿಕೆಗಳಿಗೆ, ಕರ್ನಾಟಕ ಸರಕಾರದ ಹಣಕಾಸಿನ ನೆರವಿಗೆ ಕಾಯದೆ ನನಗೆ ಮಾಹಿತಿ ಕೊಟ್ಟಲ್ಲಿ, ಇಲ್ಲಿ ನಾ ಭೂತೋ ನಾ ಭವಿಷ್ಯತ್ ಎಂಬಂತೆ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲು ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು. ಹೈದರಾಬಾದ್ ಕರ್ನಾಟಕದ ಮೊದಲ ಎಂ.ಎ. ಕನ್ನಡ ಪದವೀಧರರೂ ಹಾಗೂ ಉಸ್ಮಾನಿಯಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಸಂಸ್ಥಾಪಕ ಮುಖ್ಯಸ್ಥರಾಗಿದ್ದ ಪ್ರೊ.ಡಿ.ಕೆ.ಭೀಮಸೇನರಾವ್ ಅವರ ಪುತ್ರ ಡಿ.ಬಿ.ರಾಘವೇಂದ್ರರಾವ್, ಹೈದರಾಬಾದಿನ ಕರ್ನಾಟಕ ಸಾಹಿತ್ಯ ಮಂದಿರದ ಉಪಾಧ್ಯಕ್ಷರಾದ ರಾಘವೇಂದ್ರ ದೇಸಾಯಿ ಸೇರಿದಂತೆ ಹೈದರಾಬಾದಿನ ಅನೇಕ ಕನ್ನಡಾಭಿಮಾನಿಗಳು, ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಶಾಸಕ ಚವಾಣ್ ಗ್ರಾಮ ಸಂಚಾರ ಯಾವ ಪುರುಷಾರ್ಥಕ್ಕೆ



**ಬೀದರ್:ಡಿ.20:**ಔರಾದ್ ಶಾಸಕ ಪ್ರಭು ಚವಾಣ್ ಅವರು ಗ್ರಾಮ ಸಂಚಾರ ನಡೆಸುತ್ತಿರುವುದು ಯಾವ ಪುರುಷಾರ್ಥಕ್ಕಾಗಿ, ಜನರ ಸಮಸ್ಯೆ ಪರಿಹರಿಸುವುದಕ್ಕೋ ಅಥವಾ ಸಮಸ್ಯೆ ಸೃಷ್ಟಿಸುವುದಕ್ಕೋ ಎಂದು ಔರಾದ್‌ನ ಮುಖಂಡ ದೀಪಕ್ ಪಾಟೀಲ ಚಾಂದೋರಿ ಪ್ರಶ್ನಿಸಿದ್ದಾರೆ.

ಶಾಸಕರೊಂದಿಗೆ ಅಧಿಕಾರಿಗಳು ಗ್ರಾಮ ಸಂಚಾರಕ್ಕೆ ತೆರಳುತ್ತಿದ್ದರಿಂದ ತಾಲ್ಲೂಕು ಕಚೇರಿಗಳಲ್ಲಿ ಅಧಿಕಾರಿಗಳು ಸಿಗುತ್ತಿಲ್ಲ. ಇದರಿಂದ ಸಾರ್ವಜನಿಕರ ಕೆಲಸ, ಕಾರ್ಯಗಳಿಗೆ ತೊಂದರೆ ಉಂಟಾಗುತ್ತಿದೆ ಎಂದು ದೂರಿದ್ದಾರೆ.

ಶಾಸಕರು ತೋರಿಕೆಗೆ ಹಾಗೂ ಪ್ರಚಾರಕ್ಕಾಗಿ 2009 ರಿಂದ ಗ್ರಾಮ ಸಂಚಾರ ನಡೆಸುತ್ತಿದ್ದಾರೆ. ಜನರಿಗೆ ಏನೇನೂ ಉಪಯೋಗ ಆಗಿಲ್ಲ ಎಂದು ಆರೋಪಿಸಿದ್ದಾರೆ.

ಶಾಸಕರ ಗ್ರಾಮ ಸಂಚಾರದ ವೇಳಾ ಪಟ್ಟಿ ನೋಡಿದರೆ, ಸಮಯವಾರು ರೈಲು ನಿಲುಗಡೆಯ ಹತ್ತಾರು ಸ್ಥಳಗಳ ಪಟ್ಟಿಯಂತೆ ಭಾಸವಾಗುತ್ತದೆ. ಗ್ರಾಮ ಸಂಚಾರದ ಫಲಶ್ರುತಿಯಾಗಿದ್ದರೆ, ಶಾಸಕರು ಸಂಚಾರದಲ್ಲಿ ಈವರೆಗೆ ಬಂದ ಜನರ ಅಹವಾಲುಗಳೆಷ್ಟು, ಎಷ್ಟನ್ನು ಪರಿಹರಿಸಲಾಗಿದೆ, ಎಷ್ಟು ಅರ್ಜಿಗಳು ಬಾಕಿ ಇವೆ ಎಂಬುದ್ದರ ವಿವರ ನೀಡಬೇಕು ಎಂದು ಸವಾಲು ಹಾಕಿದ್ದಾರೆ.

ಶಾಸಕರ ಒಂದು ಗ್ರಾಮ ಸಂಚಾರ 15 ನಿಮಿಷದಲ್ಲಿ ಮುಗಿದು ಹೋಗುತ್ತಿದೆ. ಇದರಲ್ಲಿ 10 ನಿಮಿಷ ಕಾರ್ಯಕರ್ತರಿಂದ ಶಾಸಕರ ಮೆರವಣಿಗೆ, ಪಟಾಕಿ ಸಿಡಿಸುವುದು, ಹಾರ, ತುರಾಯಿ ಹಾಕುವುದರಲ್ಲಿ ಕಳೆದು ಹೋಗುತ್ತಿದೆ. ಉಳಿದ 5 ನಿಮಿಷ ಶಾಸಕರ ಸಾಧನೆ ಹೇಳಿಕೊಳ್ಳುವುದಕ್ಕೆ ಸೀಮಿತವಾಗುತ್ತಿದೆ. ಹೆಸರಿಗೆ ಮಾತ್ರ ಇದು ಗ್ರಾಮ ಸಂಚಾರ. ಇಲ್ಲಿ ಜನರ ಅಹವಾಲು ಆಲಿಸುವುದಕ್ಕೆ ಸಮಯವೇ ಇಲ್ಲ. ಒಂದೇ ದಿನ ಹಲವು ಗ್ರಾಮಗಳಲ್ಲಿ ಇದು, ನಡೆಯುತ್ತಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಒಂದು ಗ್ರಾಮದ ಜನರ ಸಮಸ್ಯೆಗಳನ್ನು ಸಮಾಧಾನದಿಂದ ಕೇಳಲು ಕನಿಷ್ಠ 3 ತಾಸಾದರೂ ಬೇಕು. 15 ನಿಮಿಷದಲ್ಲಿ ಸಮಸ್ಯೆ ಆಲಿಸುವುದು, ಪರಿಹರಿಸುವುದು ಸಾಧ್ಯವೇ ಎಂದು ಕೇಳಿದ್ದಾರೆ.

ಕ್ಷೇತ್ರದಲ್ಲಿ ಬಹಳಷ್ಟು ರಸ್ತೆಗಳು ಹಾಳಾಗಿವೆ. ವಾಹನಗಳ ಸಂಚಾರ ದುಸ್ತರವಾಗಿದೆ. ರಸ್ತೆ ದುರಸ್ತಿಗೆ ಆದ್ಯತೆ ಕೊಡುವುದು ಬಿಟ್ಟು ಕಮಿಷನ್ ಹಣಕ್ಕಾಗಿ ಶಾಸಕರು 2023–24 ಹಾಗೂ 2024–25ನೇ ಸಾಲಿನಲ್ಲಿ ಶಾಲಾ ಕೋಣೆ ದುರಸ್ತಿ, ಕೊಳವೆಬಾವಿ ಕೊರೆಸುವುದು ಹಾಗೂ ಸೋಲಾರ್ ಪ್ಯಾನಲ್ ಅಳವಡಿಕೆಗಾಗಿ ಕೆ.ಆರ್.ಐ.ಡಿ.ಎಲ್.ಗೆ ರೂ. 40 ಕೋಟಿ ಅನುದಾನ ಕೊಟ್ಟಿದ್ದಾರೆ ಎಂದು ದೂರಿದ್ದಾರೆ.

ಗ್ರಾಮ ಸಂಚಾರದ ವೇಳೆ ಶಾಸಕರು ಈ ಕಾಮಗಾರಿಗಳು ಹೇಗೆ ಆಗಿವೆ, ಇವುಗಳ ಸ್ಥಿತಿಗತಿ ಏನಿದೆ ಎಂಬ ಮಾಹಿತಿ ಕೊಡಬೇಕು. ಬೇಸಿಗೆಯಲ್ಲಿ ಜನರಿಗೆ ನೀರು ಕೊಡುವ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಜೆಜೆಎಂ ಕಾಮಗಾರಿ ಕಳಪೆಯಾಗಿದೆ ಎಂದು ಟೀಕಿಸುತ್ತಿದ್ದಾರೆ ಎಂದು ಆಪಾದಿಸಿದ್ದಾರೆ.

ಕ್ಷೇತ್ರದಲ್ಲಿ ಜೆಜೆಎಂ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿದವರು, ಅನೇಕ ಗ್ರಾಮಗಳಲ್ಲಿ ಯೋಜನೆಯಡಿ ನೀರು ಪೂರೈಕೆಗೆ ಚಾಲನೆ ನೀಡಿದವರು ಶಾಸಕರೇ. ಕೆಲ ದಿನಗಳ ಹಿಂದೆ ತಾಲ್ಲೂಕು ಮಟ್ಟದ ಕೆಡಿಪಿ ಸಭೆಯಲ್ಲಿ ಜಲಜೀವನ ಮಿಷನ್ ಕಾಮಗಾರಿ ಕಳಪೆಯಾಗಿದೆ. ಗುತ್ತಿಗೆದಾರರು ಹಾಗೂ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದವರೂ ಅವರೇ ಎಂದು ತಿಳಿಸಿದ್ದಾರೆ.

ಕ್ಷೇತ್ರದಲ್ಲಿ ತಮ್ಮ ಸಂಬಂಧಿಕರು, ಆಪ್ತರು ಹಾಗೂ ಹಿಂಬಾಲಕರಿಗೆ ಜೆಜೆಎಂ ಕಾಮಗಾರಿ ಕೊಡಿಸಿದ್ದಾರೆ. ಶೇ 90 ರಷ್ಟು ಬಿಲ್ ಪಾವತಿ ಆಗುವಂತೆಯೂ ನೋಡಿಕೊಂಡಿದ್ದಾರೆ. ಇಷ್ಟೆಲ್ಲ ಮುಗಿದ ಮೇಲೆ ಈಗ ಏನು ಕ್ರಮ ಕೈಗೊಳ್ಳುತ್ತಾರೆ ಎಂದು ಪ್ರಶ್ನೆ ಹಾಕಿದ್ದಾರೆ.

ಅಂಗನವಾಡಿ ಮಕ್ಕಳಿಗೆ ಆಹಾರ ಪೂರೈಕೆ ಗುತ್ತಿಗೆ ಕೊಡಿಸಿದ್ದಕ್ಕೆ ಪ್ರತಿಯಾಗಿ ಶಾಸಕರು ಖಾತೆ ಮೂಲಕವೇ ಕಪ್ಪ ಪಡೆದಿದ್ದಾರೆ. ಶಾಸಕರ ಆಪ್ತ ಸಹಾಯಕರು ರಿಯಲ್ ಎಸ್ಟೇಟ್ ಉದ್ಯಮಿಗಳಾಗಿ ಬದಲಾಗಿದ್ದಾರೆ. ತಾಲ್ಲೂಕಿನಲ್ಲಿ ದುಡ್ಡು ಕೊಡದೆ ಜನರ ಯಾವುದೇ ಕೆಲಸ ಆಗುತ್ತಿಲ್ಲ. ಆಡಳಿತ ಯಂತ್ರ ಸಂಪೂರ್ಣ ಕುಸಿದಿದೆ. ಅದನ್ನು ಸರಿಪಡಿಸದೆ, ಜನರ ಗಮನ ಬೇರೆಡೆ ಸೆಳೆಯಲು ಗ್ರಾಮ ಸಂಚಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

ಶಾಸಕರಿಗೆ ಜನರ ಬಗ್ಗೆ ನಿಜವಾದ ಕಳಕಳಿ ಇದ್ದರೆ, ಅವರ ಸಮಸ್ಯೆ ಬಗೆಹರಿಸುವ ಇಚ್ಛಾಶಕ್ತಿ ಇದ್ದರೆ ಅಧಿಕಾರಿಗಳನ್ನು ಕರೆದೊಯ್ದು ನಾಮ್ ಕೇ ವಾಸ್ತೆ ಗ್ರಾಮ ಸಂಚಾರ ಮಾಡುವುದನ್ನು ನಿಲ್ಲಿಸಬೇಕು. ಗ್ರಾಮ ಹಾಗೂ ಹೋಬಳಿ ಮಟ್ಟದಲ್ಲಿ ಗ್ರಾಮ ವಾಸ್ತವ್ಯ ಮಾಡಬೇಕು.

ತಾಲ್ಲೂಕು ಕಚೇರಿಗಳಲ್ಲಿ ಜನರ ಕೆಲಸ ಕಾರ್ಯಗಳಿಗೆ ಅಧಿಕಾರಿಗಳು ಸ್ಪಂದಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ಬಿಜೆಪಿ ಕಾರ್ಯಕರ್ತೆ ಆತ್ಮಹತ್ಯೆ

**ಕಲಬುರಗಿ, ಡಿ. 20–** ಮೈಮೇಲೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಬಿಜೆಪಿ ಕಾರ್ಯಕರ್ತೆ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಲಬುರಗಿ ಜಿಲ್ಲೆಯಲ್ಲಿ ನಡೆದಿದೆ.

ತಾಲೂಕಿನ ನಂದಿಕೂರ ಗ್ರಾಮದ ಬಳಿ ನಿನ್ನೆ ರಾತ್ರಿ ಈ ಘಟನೆ ನಡೆದಿದೆ. ನಂದಿಕೂರ ಗ್ರಾಮದಲ್ಲಿ ಮಲ್ಲಿನಾಥ ಬಿರಾದಾರ್ ಮನೆಯಲ್ಲಿ ಜ್ಯೋತಿ ಪಾಟೀಲ್ ಆತ್ಮಹತ್ಯೆ ಶರಣಾಗಿದ್ದಾರೆ. ಬಿಜೆಪಿ ಕಾರ್ಯಕರ್ತನಾಗಿರುವ ನಂದಿಕೂರ್ ಗ್ರಾಮದ ಮಲ್ಲಿನಾಥ್ ಮನೆಯಲ್ಲಿ ಇಲ್ಲದ ವೇಳೆ ಜ್ಯೋತಿ ಪಾಟೀಲ್ ಬಾಗಿಲು ಹಾಕಿಕೊಂಡಿದ್ದಾರೆ. ಮನೆಯಲ್ಲಿ ಮಲ್ಲಿನಾಥ ಬಿರಾದರ್ ಪತ್ನಿ, ಮೂವರು ಮಕ್ಕಳು ಮನೆಯಲ್ಲಿ ವಾಸವಿದ್ದರು. ಬಾಗಿಲು ತೆರೆದ ತಕ್ಷಣ ಜ್ಯೋತಿ ಪಾಟೀಲ್ ಬೆಂಕಿ ಹಚ್ಚಿಕೊಂಡಿದ್ದಾರೆ. ಜ್ಯೋತಿ ಪಾಟೀಲ್ ಕಲಬುರ್ಗಿಯ ಬ್ರಹ್ಮಪುರ ಬಡಾವಣೆಯ ನಿವಾಸಿ ಎಂದು ತಿಳಿದುಬಂದಿದೆ. ಘಟನೆ ಕುರಿತು ಫರತಾಬಾದ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



## ಖ್ಯಾತ ಮಲಯಾಳಂ ನಟ, ನಿರ್ದೇಶಕ ಶ್ರೀನಿವಾಸನ್ ನಿಧನ



**ಕೊಚ್ಚಿ, ಡಿ.20–** ಖ್ಯಾತ ಮಲಯಾಳಂ ನಟ ಕಮ್ ನಿರ್ದೇಶಕ ಶ್ರೀನಿವಾಸನ್ ಇಂದು ಬೆಳಿಗ್ಗೆ ಇಲ್ಲಿಗೆ ಸಮೀಪದ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ ಎಂದು ಚಲನಚಿತ್ರೋದ್ಯಮ ಮೂಲಗಳು ತಿಳಿಸಿವೆ.

ಅವರಿಗೆ 69 ವರ್ಷ ವಯಸ್ಸಾಗಿತ್ತು.ತಡರಾತ್ರಿ ಅವರನ್ನು ತ್ರಿಪುನಿತುರದಲ್ಲಿರುವ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇಂದು ಬೆಳಿಗ್ಗೆ ಅವರು ನಿಧನರಾದರು.ಕಣ್ಣೂರು ಮೂಲದ ಶ್ರೀನಿವಾಸನ್ ಕಳೆದ ಹಲವು ವರ್ಷಗಳಿಂದ ಕೊಚ್ಚಿಯಲ್ಲಿ ವಾಸಿಸುತ್ತಿದ್ದರು.ನಟನೆಯ ಜೊತೆಗೆ, ಅವರು ನಿರ್ದೇಶಕ, ಚಿತ್ರಕಥೆಗಾರ, ಡಬ್ಬಿಂಗ್ ಕಲಾವಿದ ಮತ್ತು ನಿರ್ಮಾಪಕರೂ ಆಗಿದ್ದರು.ಅವರು 200 ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ, 1976 ರಲ್ಲಿ ಮಣಿಮುಳಕ್ಕಂ ಚಿತ್ರದ ಮೂಲಕ ಪಾದಾರ್ಪಣೆ ಮಾಡಿದರು.ಅವರ ಇಬ್ಬರು ಪುತ್ರರಾದ ವಿನೀತ್ ಶ್ರೀನಿವಾಸನ್ ಮತ್ತು ಧ್ಯಾನ್ ಶ್ರೀನಿವಾಸನ್ ಸಹ ನಟರಾಗಿ ಗುರುತಿಸಿಕೊಂಡಿದ್ದಾರೆ.

ಯುವ ಮಾರ್ಗ

www.yuvamarga.com Yuva Marga yuva_marga_

# ಶಿಕ್ಷಕಿ ಝುರೀನಾ ರಾಜ್ಯ ಮಟ್ಟಕ್ಕೆ ಆಯ್ಕೆ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.20–** ರಾಯಚೂರಿನಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಶಾಲೆ ಶಿಕ್ಷಣ ಇಲಾಖೆ ಸಹಯೋಗದಲ್ಲಿ ನಡೆದ ರಾಯಚೂರು ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ಸಹಪಠ್ಯ ಚುಟುವಟಿಕೆ ಸ್ಪರ್ಧೆಯಲ್ಲಿ ತಾಲೂಕಿನ ಮುಷ್ಟೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಝುರೀನಾ ಅವರು ಗಣಿತ ವಿಷಯಕ್ಕೆ ಸಂಬಂಧಿಸಿದ ಕಲಿಕೋಪಕರಣ ಸಿದ್ಧಪಡಿಸುವ ಸ್ಪರ್ಧೆಯಲ್ಲಿ ಭಾಗವಹಿಸಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

## ರಾಯಚೂರು ಉತ್ಸವ ತಯಾರಿ ಪೂರ್ವಭಾವಿ ಸಭೆ 22ಕ್ಕೆ

**ರಾಯಚೂರು,ಡಿ.20–** 2026ರ ಜನವರಿ ಮಾಹೆಯಲ್ಲಿ ರಾಯಚೂರು ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಈ ಉತ್ಸವದ ಸಿದ್ಧತೆಗಾಗಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರ ಅಧ್ಯಕ್ಷತೆಯಲ್ಲಿ ಡಿಸೆಂಬರ್ 22ರ ಬೆಳಿಗ್ಗೆ 10.30ಕ್ಕೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದ್ದು, ಈ ಸಭೆಗೆ ಜಿಲ್ಲೆಯ ಎಲ್ಲಾ ಅಧಿಕಾರಿ, ಸಿಬ್ಬಂದಿ ಖುದ್ದಾಗಿ ಹಾಜರಾಗುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ತಾಲೂಕಿನಲ್ಲಿ ಡಿ.24ರಂದು ಇ–ಪೋತಿ ಅಂದೋಲನ

**ರಾಯಚೂರು,ಡಿ.20–**ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ ಯೋಜನೆಯಾದ ಇ–ಪೋತಿ ಅಂದೋಲನವನ್ನು ರಾಯಚೂರು ತಾಲೂಕಿನ ವ್ಯಾಪ್ತಿಯಲ್ಲಿ ಡಿಸೆಂಬರ್ 24ರಂದು ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಸೂಕ್ತ ದಾಖಲೆಗಳೊಂದಿಗೆ ಅಂದೋಲನದಲ್ಲಿ ಸಕ್ರಿಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ರಾಯಚೂರು ತಹಶೀಲ್ದಾರ್ ಸುರೇಶ ವರ್ಮ ಅವರು ಕೋರಿದ್ದಾರೆ.

ಅಂದು ಬೆಳಿಗ್ಗೆಯಿಂದ ರಾಯಚೂರಿನ ತಹಶೀಲ್ದಾರ್ ಕಚೇರಿ, ದೇವಸೂಗೂರು, ಕಲಮಲಾ, ಚಂದ್ರಬಂಡಾ, ಯರಗೇರಾ ಹಾಗೂ ಗಿಲ್ಲೇಸುಗೂರು ನಾಡ ಕಾರ್ಯಲಯದಲ್ಲಿ ಇ–ಪೋತಿ ಅಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 24ರಂದು ರಾಷ್ಟ್ರೀಯ ಗ್ರಾಹಕರ ದಿನಾಚರಣೆ

**ರಾಯಚೂರು,ಡಿ.20–**ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ ಡಿಸೆಂಬರ್ 24ರ ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ನೌಕರರ ಭವನದಲ್ಲಿ

ರಾಷ್ಟ್ರೀಯ ಗ್ರಾಹಕರ ದಿನಾಚರಣೆ–2025 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಾಲ್ಮೀಕಿ ಹಗರಣ ಮಾಜಿ ಸಚಿವ ನಾಗೇಂದ್ರಗೆ ಸೇರಿದ 8 ಕೋಟಿ ರೂ ಆಸ್ತಿ ಇ.ಡಿ ಜಪ್ತಿ

**ಬಳ್ಳಾರಿ:ಡಿ,20–** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣಕ್ಕೆ ಸಂಬಂಧಿಸಿ ಅಕ್ರಮ ಹಣ ವರ್ಗಾವಣೆ ಆರೋಪದಡಿ ಮಾಜಿ ಸಚಿವ, ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರಿಗೆ ಸೇರಿದ 8 ಕೋಟಿ ರು.ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಲಾಗಿದೆ ಎಂದು ಜಾರಿ ನಿರ್ದೇಶನಾಲಯ (ಇ.ಡಿ.) ಹೇಳಿದೆಂದು ಪಿಟಿಐ ವರದಿ ಮಾಡಿದೆ.ಜಪ್ತಿ ಮಾಡಲಾದ ಆಸ್ತಿಯಲ್ಲಿ ನಾಲ್ಕು ವಸತಿ ಗೃಹ ಮತ್ತು ವಾಣಿಜ್ಯ ಭೂಮಿ ಹಾಗೂ ಒಂದು ಕಟ್ಟಡವೂ ಸೇರಿದೆ. ಪಿಎಂಎ ಕಾಯ್ದೆಯಡಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಜಾರಿ ನಿರ್ದೇಶ ನಾಲಯ ಹೇಳಿದೆ.

ಅಕ್ರಮದಿಂದ ಸಂಪಾದಿಸಿದ ಬಾಕಿ ಹಣ ಪತ್ತೆ ಹಚ್ಚಲು ಸಾಧ್ಯವಾಗಿಲ್ಲ. ಅದನ್ನು ನಾಗೇಂದ್ರ ಅವರು ಮುಚ್ಚಿಟ್ಟಿರಬಹುದು ಅಥವಾ ಖರ್ಚು ಮಾಡಿರಬಹುದು.

ಹೀಗಾಗಿ ಅಕ್ರಮಕ್ಕೆ ಸಮನಾದ ಮೌಲ್ಯದ ಆಸ್ತಿ ಮುಟ್ಟುಗೋಲು ಹಾಕಲಾಗಿದೆ' ಎಂದು ಇ.ಡಿ. ಮಹರ್ಷಿ ವಾಲ್ಮೀಕಿ ಎಸ್.ಟಿ ಅಭಿವೃದ್ಧಿ ನಿಗಮದಡಿ ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ಮೀಸಲಿಟ್ಟ ಸುಮಾರು 100 ಕೋಟಿ ರು. ದುರುಪಯೋಗ ಆರೋಪದ ಮೇರೆಗೆ ಆಗ ಸಚಿವರಾಗಿದ್ದ ನಾಗೇಂದ್ರ ರನ್ನು ಬಂಧಿಸಲಾಗಿತ್ತು.
ಈಗ ಅವರು ಜಾಮೀನಿನ ಮೇಲೆ ಹೊರಗಿದ್ದಾರೆ ಎಂದಿದೆ.

# ಶ್ರೀ ರಾಮಾಂಜನೇಯ್ಯ ಪಲ್ಲಕ್ಕಿ ಉತ್ಸವ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.20–** ಪಟ್ಟಣದ ನಾಮಜಗೇರಿ ಗುಡ್ಡ ಮಾರುತಿ ನಗರದ ಶ್ರೀ ರಾಮಾಂಜನೇಯ್ಯ ದೇವಸ್ಥಾನದ 29 ನೇ ವರ್ಷದ ಜಾತ್ರಮಹೋತ್ಸವ ಅಂಗವಾಗಿ ಶುಕ್ರವಾರ ಸಂಜೆ ಎಳ್ಳು ಅಮವಾಸ್ಯೆ ದಿನ ಬೆಳಿಗ್ಗೆ ಶ್ರೀ ರಾಮಾಂಜನೇಯ್ಯ ಮೂರ್ತಿಗೆ ಅಭಿಷೇಕ.ಎಲೆ ಪೂಜೆ,ಹೂವಿನ ಅಲಂಕಾರ, ಮಹಾಮಂಗಳರಾತಿ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು ಸಂಜೆ ಸುಮಂಗಲಿಯರು ಕುಂಭ ಮತ್ತು ಕಳಸಗಳೊಂದಿಗೆ ಗಂಗಾ ಪೂಜೆ ನೆರವೇರಿಸಿ ದೇವಸ್ಥಾನದಲ್ಲಿನ ಶ್ರೀ ರಾಮಾಂಜನೇಯ್ಯ ಉತ್ಸವ ಮೂರ್ತಿಗಳನ್ನು ಅಲಂಕಾರಿಸಿ ಪಲ್ಲಕ್ಕಿಯಲ್ಲಿಟ್ಟು ಡೋಳ್ಳು, ಕೋಲಾಟ ತಂಡಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು.

ಭಕ್ತರಿಗೆ ಅನ್ನದಾಸೋಹ ಸೇವೆ ನಡೆಯಿತು ಜೆ.ಡಿ.ಎಸ್.ರಾಜ್ಯ ಯುವ ಘಟಕದ ಉಪಾಧ್ಯಕ್ಷರಾದ ರಾಜಾ ರಾಮಚಂದ್ರನಾಯಕ ಸೇರಿದಂತೆ ಸಾವಿರಾರು ಭಕ್ತರು ,ಶ್ರೀ ರಾಮಾಂಜನೇಯ್ಯಸೇವಾ ಸಮಿತಿಯ ಸದಸ್ಯರು ಭಾಗವಹಿಸಿದರು.

## ಸರ್ವಧರ್ಮ ಸೇವಾ ವೆಲ್ಪೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಬೆಡ್ ಶೀಟ್ ಗಳನ್ನು ಹಂಚುವ ಕಾರ್ಯಕ್ರಮ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.20–** ಪಟ್ಟಣದ ಕಲ್ಯಾಣ ಕರ್ನಾಟಕ ಸಾರಿಗೆ ಇಲಾಖೆಯ ಬಸ್ ನಿಲ್ದಾಣದ ಆವರಣದಲ್ಲಿ ಸರ್ವಧರ್ಮ ಸೇವಾ ವೆಲ್ಪೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ನಡೆದ ಸಮಾಜಸೇವ ಕಾರ್ಯಕ್ರಮಕ್ಕೆ ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಚಾಲನೆ ನೀಡಿ ಮಾತನಾಡಿ ಜಗತ್ತಿನ ಎಲ್ಲಾ ಧರ್ಮಗಳು ಮನುಷ್ಯರನ್ನು ದುಖಃದಿಂದ ಪಾರು ಮಾಡುವುದಕ್ಕಾಗಿಯೇ ವಿವಿಧ ಧರ್ಮಗಳು ಹುಟ್ಟಿದವು ನಾಡಿನ ಅನೇಕ ಮಹಾತ್ಮರು ತಮಗಾಗಿ ಬದುಕದೆ ಜಾತಿ,ಧರ್ಮ,ಬೇದವಿಲ್ಲದೆ ಎಲ್ಲಾ ಧರ್ಮದ ದಿನದಲಿತರ ಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ. ಅದರಂತೆ ಸರ್ವಧರ್ಮ ಸೇವಾ ವೆಲ್ಪೇರ್ ಟ್ರಸ್ಟ್ ವತಿಯಿಂದ ಕ್ರಿಸ್‌ಮಸ್ ಹಬ್ಬದ ಅಂಗವಾಗಿ ಬಡವರಿಗೆ ಅನ್ನದಾನ ಹಾಗೂ ಬೆಡ್ ಶೀಟ್ ಗಳನ್ನು ವಿತರಿಸುವ ಮೂಲಕ ಸಂಸ್ಥೆಯ ಅಧ್ಯಕ್ಷರಾದ ಹನುಮಂತಕೋಟೆಯವರು ನಿರಂತರವಾಗಿ ಜನಸೇವೆಯನ್ನು ಮಾಡುತ್ತ ಬಂದಿದ್ದಾರೆ ಅವರಿಗೆ ಶ್ರೀಮಠದ ವತಿಯಿಂದ ನಿರಂತರವಾಗಿ ಸಹಕಾರವನ್ನು ನೀಡುತ್ತ ಬಂದಿದೇವೆ ಪ್ರತಿಯೊಬ್ಬರು ಕೂಡ ಧರ್ಮದ ಹೆಸರಿನಲ್ಲಿ ಸಮಾಜದ ಸ್ವಸ್ಥ ವನ್ನು ಕದಡುವ ಕೇಲಸವನ್ನು ಮಾಡದೆ ಎಲ್ಲಾ ಜನರು ಕೂಡಿ ಕೊಂಡು ಸಮಾಜ ಮುಖಿಯಾದ ಕಾರ್ಯಗಳನ್ನು ಹಮ್ಮಿಕೊಳ್ಳುವ ಮೂಲಕ ಸಮಾಜದಲ್ಲಿ ಶಾಂತಿ ಸೌಹಾರ್ಧತೆ ಮೂಡಿಸುವ ಕಾರ್ಯವನ್ನು ಮಾಡಬೇಕು ಎಂದು ತಿಳಿಸಿದರು.

ಪಟ್ಟಣದ ಬಸ್ ನಿಲ್ದಾಣದಲ್ಲಿನ ವೃದ್ದರಿಗೆ ಹಾಗೂ ಅಂಗವಿಕಲರಿಗೆ , ಅನಾಥರಿಗೆ ಚಳಿ ಹೆಚ್ಚಾಗಿರುವ ಕಾರಣ ಬೆಡ್ ಶೀಟ್ ಗಳನ್ನು , ವಸ್ತ್ರಗಳನ್ನು ವಿತರಿಸಲಾಯಿತು. ಬಡಜನರಿಗೆ ಅನ್ನದಾನ ಕಾರ್ಯಕ್ರಮ ಕೂಡ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಸ್ಲಿಂ ಧರ್ಮದ ಗುರುಗಳಾದ ಸೈಯದ್ ಶಾಹ ಸಜ್ಜದ್ ಹುಸೇನಿ ಮತ್ವಲೇ, ತುಮಕುರಿನ ಫಾ.ಜಾಯ್ ಕೆ.ಪೀಟರ್ ಮಾರೇಶ ಫಾಸ್ಟರ್, ಸರ್ವಧರ್ಮ ಸೇವಾ ವೆಲ್ಪೇರ್ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಹನುಮಂತ ಕೋಟೆ, ಈರೇಶ್ ಹುಲಿಗುಂಚಿ,ಹನುಮಂತ ಜೆ.ಸಿರವಾರ, ಶರಣು ಮುದ್ದನಗುಡ್ಡಿ,ಭಾರತೀಯ ಸೇವಾ ಸಮಿತಿ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷರಾದ ಸಾಹೀರಭಾನು, ಗುಲಾಂ ಹುಸೇನ್, ತಾ. ಟೈಲರ್ ಸಂಘದ ಅಧ್ಯಕ್ಷರಾದ ಮೆಹಬೂಬ್‌ಸೇರಿದಂತೆ ಇನ್ನಿತರರು ಇದ್ದರು.

## ಪೋತ್ನಾಳ ಗ್ರಾಮದಲ್ಲಿ ಲಸಿಕೆ ಕುರಿತು ಜಾಗೃತಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ– ಮುಖ್ಯ ಶಿಕ್ಷಕ ಗುಂಡಯ್ಯ ನಾಯಕ




ಯುವಮಾರ್ಗ ಸುದ್ದಿ

**ಮಾನ್ವಿ,ಡಿ.20–**ಪಲ್ಸ್ ಪೋಲಿಯೊ ಲಸಿಕೆ ಅಭಿಯಾನದಡಿ ಡಿ.21 ರಿಂದ 24ರವರೆಗೆ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸಬೇಕೆಂದು ಎಂದು ಶಾಲೆಯ ಮುಖ್ಯ ಶಿಕ್ಷಕ ಗುಂಡಯ್ಯ ನಾಯಕ ಅವರು ತಿಳಿಸಿದರು.

ಅವರಿಂದು ತಾಲೂಕಿನ ಪೋತ್ನಾಳ ಗ್ರಾಮದ ಜನತಾ ಕಾಲೊನಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ 5 ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಜಾಗೃತಿ ಕುರಿತು ಮಾತನಾಡಿದರು.

ಪ್ರಸಕ್ತ ಸಾಲಿನ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ನಿಯೋಜನಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು.

**ಲಸಿಕೆ ಜಾಗೃತಿ:**ಗ್ರಾಮದ ವಿವಿಧ ಪ್ರದೇಶ ದಲ್ಲಿ ತಮ್ಮ ವ್ಯಾಪ್ತಿಯಲ್ಲಿನ 5 ವರ್ಷದೊ ಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೊ ಲಸಿಕೆ ಹಾಕಿಸುವ ಕುರಿತು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಸಹ ಶಿಕ್ಷಕಿ ಎಂ, ಗೀತಾ,ಚಾಯರಾಣಿ, ಅತಿಥಿ ಶಿಕ್ಷಕಿಯರಾದ ರೇಖಾ, ಗಂಗಮ್ಮ,ಅಂಗನವಾಡಿ ಟೀಚರ್ ಲಕ್ಷ್ಮೀ , ಆಶಾಕಾರ್ಯಕರ್ತೆ ಸೇರಿದಂತೆ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಡಿಸೆಂಬರ್ 21ರವರೆಗೆ ಬೆಳಗಿನ ಜಾವ ತೀವ್ರ ಶೀತ ಗಾಳಿ ಬೀಸುವ ಸಾಧ್ಯತೆ, ಸಾರ್ವಜನಿಕರಿಗೆ ಮುಂಜಾಗ್ರತಾ ಸಲಹೆಗಳು

**ರಾಯಚೂರು,ಡಿ.20–** ಭಾರತೀಯ ಹವಾಮಾನ ಇಲಾಖೆಯ ವರದಿಯಂತೆ ಡಿಸೆಂಬರ್ 20 ರಿಂದ 21ರವರೆಗೆ ರಾಯಚೂರು ಜಿಲ್ಲೆಯಾದ್ಯಂತ ಬೆಳಗಿನ ಜಾವ ತೀವ್ರವಾದ ಶೀತ ಗಾಳಿ ಬೀಸುವ ಸಾಧ್ಯತೆಯಿರುತ್ತದೆ. ಹಾಗೂ ಸಾಮಾನ್ಯ ತಾಪಮಾನಕ್ಕಿಂತ 4–6 ಡಿಗ್ರಿ ಸೆಲ್ಸಿಯಸ್ ನಷ್ಟು ಕಡಿಮೆ ಆಗುವ ಸಾಧ್ಯತೆರುವ ಕಾರಣ ಮುಂಜಾಗ್ರತಾ ಕ್ರಮವಾಗಿ ಎಲ್ಲಾ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳುವಂತೆ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸಲಹೆ ಮಾಡಿದ್ದಾರೆ.

ಸಾರ್ವಜನಿಕರು ಮುಂಜಾಗ್ರತಾ ಕ್ರಮವಾಗಿ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಲಹೆಗಳನ್ನು ಪಾಲನೆ ಮಾಡಬೇಕು.

**ಏನು ಮಾಡಬೇಕು:** ಸಾರ್ವಜನಿಕರು ಬೆಳಗ್ಗೆ ಸೂರ್ಯೋದಯಕ್ಕಿಂತ ಮುಂಚೆ ಹಾಗೂ ಸೂರ್ಯಾಸ್ತದ ನಂತರ ವಾಕಿಂಗ್ ಬರುವಾಗ ಮುನ್ನೆಚ್ಚರಿಕೆ ವಹಿಸಿಬೇಕು. ಸಾಧ್ಯವಾದಷ್ಟು ಮನೆ ಬಿಟ್ಟು ಹೊರಗಡೆ ಬರಬಾರದು. ಒಂದು ವೇಳೆ ಅವಶ್ಯವಿದ್ದಲ್ಲಿ ಬೆಚ್ಚನೆಯ ಉಡುಪುಗಳಾದ ಸ್ವೇಟರ್, ಜಾಕೇಟ್, ಉಲನ್ ಟೋಪಿ, ಕಾಲುಕುಬುಸ, ಕೈಗವ ಧರಿಸಬೇಕು. ಹಿರಿಯರಿಗೆ ಹಾಗೂ ಮಕ್ಕಳನ್ನು ಅನವಶ್ಯಕವಾಗಿ ಮನೆಯಿಂದ ಹೊರಗಡೆ ಬಿಡದಿರಲು ಹಾಗೂ ಅವರ ಆರೋಗ್ಯದ ಕಡೆ ಗಮನ ಹರಿಸಬೇಕು.

ಜ್ವರ, ಉಸಿರು ಕಟ್ಟಿಕೊಳ್ಳುವ, ಮೂಗು ಅಥವಾ ಮೂಗಿನ ರಕ್ತಸ್ರಾವದಂತಹ ವಿವಿಧ ಕಾಯಿಲೆಗಳು ಹೆಚ್ಚಿನ ಸಂಭವನಿಯತೆಯು ಸಾಮಾನ್ಯವಾಗಿ ಶೀತಕ್ಕೆ ಧೀರ್ಘಕಾಲದವರೆಗೆ ಒಡ್ಡಿಕೊಳ್ಳುವುದರಿಂದ ಉಲ್ಬಣಗೊಳ್ಳುತ್ತದೆ. ಈ ರೀತಿಯ ರೋಗಲಕ್ಷಣಗಳಿಗಾಗಿ ವೈದ್ಯರನ್ನು ಸಂಪರ್ಕಿಸಬೇಕು. ಶೀತ ಅಲೆಯು ನಿಮ್ಮ ಪ್ರದೇಶದಲ್ಲಿ ಇದೆಯೇ ಎಂದು ತಿಳಿಯಲು ರೇಡಿಯೊವನ್ನು ಆಲಿಸಿ, ಟಿವಿ ವೀಕ್ಷಿಸಿ. ಸ್ಥಳೀಯ ಹವಾಮಾನ ಮುನ್ಸೂಚನೆಗಾಗಿ ಪತ್ರಿಕೆಗಳನ್ನು ಓದಬೇಕು. ತುರ್ತು ಸಾಮಗ್ರಿಗಳನ್ನು ಸಿದ್ಧವಾಗಿಡಬೇಕು.

ದೇಹದ ಉಷ್ಣತೆಯ ಸಮತೋಲನವನ್ನು ಕಾಪಾಡಿಕೊಳ್ಳಲು ಆರೋಗ್ಯಕರ ಆಹಾರವನ್ನು ಸೇವಿಸಿ ಬಿಸಿ ದ್ರವಗಳನ್ನು ನಿಯಮಿತವಾಗಿ ಕುಡಿಯಿರಿ, ಏಕೆಂದರೆ ಇದು ಶೀತದ ವಿರುದ್ಧ ಹೋರಾಡಲು ದೇಹದ ಉಷ್ಣತೆಯನ್ನು ಕಾಪಾಡಿಕೊಳ್ಳುತ್ತದೆ.

ಏನು ಮಾಡಬಾರದು: ಶೀತಕ್ಕೆ ದೀರ್ಘಕಾಲದವರೆಗೆ ಒಡ್ಡಿಕೊಳ್ಳುವುದನ್ನು ತಪ್ಪಿಸಬೇಕು. ಮದ್ಯಪಾನ ಮಾಡಬೇಡಿ. ಇದು ನಿಮ್ಮ ದೇಹದ ಉಷ್ಣತೆಯನ್ನು ಕಡಿಮೆ ಮಾಡುತ್ತದೆ. ಇದು ವಾಸ್ತವವಾಗಿ ನಿಮ್ಮ ರಕ್ತನಾಳಗಳನ್ನು ಕಿರಿದಾಗಿಸುತ್ತದೆ. ವಿಶೇಷವಾಗಿ ಕೈಯಲ್ಲಿ ಇದು ಲಘೋಷ್ಣತೆಯ ಅಪಾಯವನ್ನು ಹೆಚ್ಚಿಸುತ್ತದೆ.

ನಡುಗುವುದನ್ನು ನಿರ್ಲಕ್ಷಿಸಬೇಡಿ ಏಕೆಂದರೆ ದೇಹವು ಶಾಖವನ್ನು ಕಳೆದುಕೊಳ್ಳುವ ಮೊದಲ ಸಂಕೇತವಾಗಿರುತ್ತದೆ. ಆದ್ದರಿಂದ ಮನೆಯೊಳಗೆ ವಿಶ್ರಾಂತಿ ಪಡೆಯಿರಿ. ಸಂಪೂರ್ಣವಾಗಿ ಎಚ್ಚರಗೊಳ್ಳದ ಹೊರತು ಪೀಡಿತ ವ್ಯಕ್ತಿಗೆ ಯಾವುದೇ ದ್ರವವನ್ನು ನೀಡಬಾರದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಗ್ಯಾರಂಟಿ ಯೋಜನೆಗಳ ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ರಾಯಚೂರು ಜಿಲ್ಲಾ ಪ್ರವಾಸ

**ರಾಯಚೂರು ಡಿ,20–** ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್ ಅವರು ಡಿಸೆಂಬರ್ 21ರಿಂದ ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಡಿಸೆಂಬರ್ 21ರ ಬೆಳಿಗ್ಗೆ 11 ಗಂಟೆಗೆ ರಸ್ತೆಯ ಮೂಲಕ ಬೆಂಗಳೂರಿನಿಂದ ನಿರ್ಗಮಿಸಿ ಸಂಜೆ 6ಗಂಟೆಗೆ ರಾಯಚೂರಿಗೆ ಆಗಮಿಸುವರು. ಡಿಸೆಂಬರ್ 22ರ ಮಧ್ಯಾಹ್ನ 2 ಗಂಟೆಗೆ ನಗರದ ಕೃಷಿ ವಿಶ್ವವಿದ್ಯಾಲಯದ ಆವರಣದ ಕೃಷಿ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ ಯುವನಿಧಿ ಯೋಜನೆ ಸೇರಿದಂತೆ ಗ್ಯಾರಂಟಿ ಯೋಜನೆಗಳು ವಿದ್ಯಾರ್ಥಿಗಳು ಹಾಗೂ ಸಮಾಜದಲ್ಲಿ ಬೀರಿರುವ ಸಕಾರಾತ್ಮಕ ಪರಿಣಾಮಗಳ ಕುರಿತು ಮುಕ್ತ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಸಂಜೆ 4 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಪ್ರಸ್ತುತದವರೆಗೆ ಸಾಧಿಸಿರುವ ಪ್ರಗತಿಯ ಕುರಿತು ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲೂಕು ಗ್ಯಾರಂಟಿ ಸಮಿತಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆಯಲ್ಲಿ ಭಾಗಿಯಾಗುವವರು. ಸಂಜೆ 6 ಗಂಟೆಗೆ ಪಕ್ಷದ ಕಚೇರಿಗೆ ಭೇಟಿ ನೀಡಿ ಪಕ್ಷದ ಮುಖಂಡರೊಂದಿಗೆ ಸಭೆ ನಡೆಸಿ, ಬೀದರ್ ಜಿಲ್ಲೆಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾದ ಚಂದ್ರಶೇಖರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H